ಸಂಪುಟ: 11 ಸಂಚಿಕೆ: 168 ಪುಟ: 4+2 ಬೆಲೆ : 3.00 ಶುಕ್ರವಾರ, ಆಗಸ್ಟ್ 07, 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್ ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYA SAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 168 Pages : 4+2 Rate : 3.00 Friday, August 07, 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2020-22

ವಿಜಯ ಸಾಕ್ಷಿ ದಿನಪತ್ರಿಕೆ ಈಗ ಆನ್ ಲೈನ್ ನಲ್ಲಿಯೂ ಲಭ್ಯ. ನಿಮ್ಮ ನೆಚ್ಚಿನ ಪತ್ರಿಕೆಯನ್ನು ಓದಲು www.epaper.Vijayasakshi.com ಜಾಲತಾಣಕ್ಕೆ ಭೇಟಿ ನೀಡಿ. ಕ್ಷಣ ಕ್ಷಣದ ಸುದ್ದಿಗಳಿಗಾಗಿ www.Vijayasakshi.com ವೀಕ್ಷಿಸಿ.

## ಸರ್ಕಾರಿ ಕೆಲಸ ದೇವರ ಕೆಲಸ ಕೇವಲ ಫಲಕಕ್ಕಲ್ಲ | ಭ್ರಷ್ಟಾಚಾರ, ವಿಳಂಬ, ನಿರ್ಲಕ್ಷ್ಯಕ್ಕೆ ಫಣೇಂದ್ರ ಎಚ್ಚರಿಕೆ

# ಕರ್ತವ್ಯ ಮರೆತರೆ ಕಾನೂನು ಕ್ರಮ ಅನಿವಾರ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಸರ್ಕಾರಿ ಕಚೇರಿಗಳಲ್ಲಿ ಬರೆಯಲಾಗಿರುವ 'ಸರ್ಕಾರಿ ಕೆಲಸ ದೇವರ ಕೆಲಸ' ಎಂಬ ವಾಕ್ಯ ಕೇವಲ ಗೋಡೆಯ ಮೇಲಿನ ಫಲಕಕ್ಕೆ ಸೀಮಿತವಾಗಬಾರದು. ಸಾರ್ವಜನಿಕರಿಗೆ ಸೇವೆ ಸಲ್ಲಿಸುವುದು ಹಾಗೂ ಅವರ ಸಮಸ್ಯೆಗಳಿಗೆ ಕಾನೂನುಬದ್ಧವಾಗಿ ಸ್ಪಂದಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಮೊದಲ ಆದ್ಯ ಕರ್ತವ್ಯವಾಗಿದೆ ಎಂದು ಕರ್ನಾಟಕ ಉಪಲೋಕಾಯುಕ್ತ ನ್ಯಾ. ಕೆ.ಎನ್. ಫಣೀಂದ್ರ ಅಧಿಕಾರಿಗಳಿಗೆ ಕಿವಿಮಾತು ಹೇಳಿದರು.

ನಗರದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ ಗುರುವಾರ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗೆ ಸಾರ್ವಜನಿಕರ ದೂರುಗಳ ವಿಚಾರಣೆ ಹಾಗೂ ಪ್ರಕರಣಗಳ ವಿಲೇವಾರಿ ಸಭೆಯನ್ನು ಉದ್ಘಾಟಿಸಿ ಮಾತನಾಡಿದ ಅವರು, ರಾಜ್ಯದ ಸುಮಾರು 8 ಕೋಟಿ ಜನರಿಗೆ ಉತ್ತಮ ಆಡಳಿತ, ಮೂಲಸೌಕರ್ಯ ಹಾಗೂ ಸರ್ಕಾರಿ ಸೇವೆಗಳನ್ನು ಒದಗಿಸುವ ಜವಾಬ್ದಾರಿ ಕೇವಲ ಶೇ.1ರಷ್ಟು ಇರುವ ಸರ್ಕಾರಿ ಕಾರ್ಯಾಂಗದ ಮೇಲಿದೆ. ಈ ಹೊಣೆಗಾರಿಕೆಯನ್ನು ಅಧಿಕಾರಿಗಳು ಪ್ರೀತಿ, ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಬೇಕು ಎಂದು ಹೇಳಿದರು.

ಕಾನೂನುಬಾಹಿರವಾಗಿ ಕಾರ್ಯನಿರ್ವಹಿಸುವುದು, ಲಂಚ ಪಡೆಯುವುದು ಹಾಗೂ ಭ್ರಷ್ಟಾಚಾರದಲ್ಲಿ ತೊಡಗುವುದು **Malfeasance**, ಮಾಡಬೇಕಾದ ಕೆಲಸವನ್ನು ಸಮಯಕ್ಕೆ ಮಾಡದೇ ವಿಳಂಬಿಸುವುದು **Misfeasance**, ಯಾವುದೇ ಕ್ರಮ ಕೈಗೊಳ್ಳದೆ ಅರ್ಜಿಗಳನ್ನು ನಿರ್ಲಕ್ಷಿಸುವುದು **Nonfeasance** ಆಗಿದ್ದು, ಈ ಮೂರು ರೀತಿಯ ಆಡಳಿತಾತ್ಮಕ ಲೋಪಗಳು ಸರ್ಕಾರದ ಮೇಲಿನ ಸಾರ್ವಜನಿಕರ ವಿಶ್ವಾಸವನ್ನು ಕುಗ್ಗಿಸುತ್ತವೆ. ಆದ್ದರಿಂದ ಇವುಗಳಿಗೆ ಅವಕಾಶ ನೀಡಬಾರದು ಎಂದು ಎಚ್ಚರಿಸಿದರು.



ಸ್ವಾಮಿ ವಿವೇಕಾನಂದರ ನಾವು ಪ್ರಾಮಾಣಿಕರಾಗಿರುವುದೇ ದೇಶಕ್ಕೆ ಕೊಡುವ ದೊಡ್ಡ ಕೊಡುಗೆ ಎಂಬ ಸಂದೇಶವನ್ನು ಪ್ರತಿಯೊಬ್ಬ ಸರ್ಕಾರಿ ನೌಕರ ತನ್ನ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಾರ್ವಜನಿಕರ ಅರ್ಜಿಗಳನ್ನು ಕಾಲಮಿತಿಯೊಳಗೆ ವಿಲೇವಾರಿ ಮಾಡಬೇಕು. ಯಾವುದಾದರೂ ಕಾರಣದಿಂದ ವಿಳಂಬವಾದರೆ ಸೂಕ್ತ ಎಂಡಾರ್ಸ್‌ಮೆಂಟ್ ನೀಡಿ, ಮೇಲ್ಮನವಿ ಸಲ್ಲಿಸುವ ಮಾರ್ಗವನ್ನೂ ತಿಳಿಸಬೇಕು. ಯಾವುದೇ ಒತ್ತಡಕ್ಕೆ ಮಣಿಯದೆ ಸಂವಿಧಾನಬದ್ಧವಾಗಿ ಕರ್ತವ್ಯ ನಿರ್ವಹಿಸಬೇಕು ಎಂದು ಸೂಚಿಸಿದರು.

ಆಡಳಿತದಲ್ಲಿ ಪಾರದರ್ಶಕತೆಗೆ ಮೊದಲ ಆದ್ಯತೆ ನೀಡಬೇಕು. ಸಹಾನುಭೂತಿಯಿಂದ ಸಾರ್ವಜನಿಕರೊಂದಿಗೆ ವರ್ತಿಸಿ, ಕಾನೂನಿನ ಅನ್ವಯ ಸಮಸ್ಯೆಗಳಿಗೆ ಪರಿಹಾರ ನೀಡಬೇಕು.

ವಿನಾಕಾರಣ ವಿಳಂಬ ಮಾಡುವುದೂ ದುರಾಡಳಿತವೇ ಆಗಿದ್ದು, ಅಧಿಕಾರ ದುರ್ಬಳಕೆ ಮಾಡಿಕೊಂಡು ಸಾರ್ವಜನಿಕರನ್ನು ಸತಾಯಿಸುವುದು ಗಂಭೀರ ಅಪರಾಧದ ಸ್ವರೂಪ ಹೊಂದಿದೆ ಎಂದು ಹೇಳಿದರು.

ಪಶ್ಚಾತ್ತಾಪಕ್ಕಿಂತ ಪ್ರಾಯಶ್ಚಿತ್ತ ದೊಡ್ಡದು ಎಂಬುದನ್ನು ಅರಿತು ಪ್ರತಿಯೊಬ್ಬ ಅಧಿಕಾರಿಯೂ ಕರ್ತವ್ಯನಿಷ್ಠೆಯಿಂದ ಕಾರ್ಯನಿರ್ವಹಿಸಬೇಕು. ದೇಹಕ್ಕೆ ಮರಣವಿದ್ದರೂ ಆತ್ಮಕ್ಕೆ ಮರಣವಿಲ್ಲ ಎಂಬ ಆಧ್ಯಾತ್ಮಿಕ ಚಿಂತನೆಯೊಂದಿಗೆ ಉತ್ತಮ ಕರ್ಮದ ಮೂಲಕ ಸಮಾಜಕ್ಕೆ ಸೇವೆ ಸಲ್ಲಿಸಬೇಕು ಎಂದು ಅವರು ಅಧಿಕಾರಿಗಳಿಗೆ ಸಲಹೆ ನೀಡಿದರು.

ಸಾರ್ವಜನಿಕರನ್ನು ಉದ್ದೇಶಿಸಿ ಮಾತನಾಡಿದ ಅವರು, ಪ್ರಾಮಾಣಿಕ ಅಧಿಕಾರಿಗಳ ವಿರುದ್ಧ ಸುಳ್ಳು ದೂರುಗಳನ್ನು ನೀಡಬಾರದು. ಲೋಕಾಯುಕ್ತದ ವ್ಯಾಪ್ತಿಗೆ ಬರುವ ಪ್ರಕರಣಗಳ ಬಗ್ಗೆ ಅರಿವು ಹೊಂದಿ ದೂರು ಸಲ್ಲಿಸುವಂತೆ ಮನವಿ ಮಾಡಿದರು.

ಸಭೆಯಲ್ಲಿ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ, ಸುನೀಲಕುಮಾರ್ ಆರ್., ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್., ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರೋಹನ್ ಜಗದೀಶ್, ಉಪ ಅರಣ್ಯ ಸಂರಕ್ಷಣಾಧಿಕಾರಿ ಸಂತೋಷ್ಕ್., ಡಿವೈಎಸ್‌ಪಿ ಮಹಾಂತೇಶ ಸಜ್ಜನ, ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಎಸ್.ಟಿ. ಸಿದ್ದಲಿಂಗಪ್ಪ, ಉಪಾಧೀಕ್ಷಕ ಲೋಕೇಶ್ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಬಳಿಕ ಲೋಕಾಯುಕ್ತ ಕಚೇರಿಯಲ್ಲಿ ದಾಖಲಾಗಿದ್ದ ಸಾರ್ವಜನಿಕರ ದೂರುಗಳ ವಿಚಾರಣೆ ನಡೆಸಿ, ಪ್ರಕರಣಗಳ ವಿಲೇವಾರಿಗೆ ಅಗತ್ಯ ನಿರ್ದೇಶನ ನೀಡಲಾಯಿತು.

> **ಸಾರ್ವಜನಿಕರ ಹಕ್ಕುಗಳನ್ನು ರಕ್ಷಿಸುವುದು ಮತ್ತು ಸರ್ಕಾರಿ ಸೌಲಭ್ಯಗಳನ್ನು ಸಮಯಕ್ಕೆ ತಲುಪಿಸುವುದು ಪ್ರತಿಯೊಬ್ಬ ಸರ್ಕಾರಿ ನೌಕರನ ಮೊದಲ ಕರ್ತವ್ಯ. ಕರ್ತವ್ಯ ನಿರ್ಲಕ್ಷ್ಯ, ಉದಾಸೀನತೆ ಹಾಗೂ ಭ್ರಷ್ಟಾಚಾರ ಸಹಿಸುವುದಿಲ್ಲ. ತಪ್ಪಿತಸ್ಥ ಅಧಿಕಾರಿಗಳು ಮತ್ತು ಸಿಬ್ಬಂದಿ ವಿರುದ್ಧ ಲೋಕಾಯುಕ್ತ ಕಾಯ್ದೆಯಡಿ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು.**
> **– ನ್ಯಾ. ಕೆ.ಎನ್. ಫಣೀಂದ್ರ,** ಕರ್ನಾಟಕ ಉಪಲೋಕಾಯುಕ್ತ

## ಮುಳಗುಂದದಲ್ಲಿ ರಾಜ್ಯ ಮಟ್ಟದ ಮೌಂಟೇನ್ ಬೈಕ್ ಸೈಕ್ಲಿಂಗ್ ಸ್ಪರ್ಧೆ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ರಾಜ್ಯ ಸೈಕ್ಲಿಂಗ್ ಅಸೋಸಿಯೇಷನ್ ಹಾಗೂ ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಸಂಯುಕ್ತ ಆಶ್ರಯದಲ್ಲಿ 21ನೇ ರಾಜ್ಯಮಟ್ಟದ ಮೌಂಟೇನ್ ಬೈಕ್ ಸೈಕ್ಲಿಂಗ್ ಚಾಂಪಿಯನ್‌ಶಿಪ್ ಆಗಸ್ಟ್ 8 ಮತ್ತು 9ರಂದು ಗದಗ ಜಿಲ್ಲೆಯ ಮುಳಗುಂದ ಗ್ರಾಮದಲ್ಲಿ ನಡೆಯಲಿದೆ ಎಂದು ಗದಗ ಜಿಲ್ಲಾ ಸೈಕ್ಲಿಂಗ್ ಅಸೋಸಿಯೇಷನ್ ಅಧ್ಯಕ್ಷ ಜಿ. ವ್ಹಿ. ಪಾಟೀಲ ತಿಳಿಸಿದರು.

ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, 14, 16, 18 ವರ್ಷದ ಬಾಲಕ-ಬಾಲಕಿಯರು, 20 ವರ್ಷದೊಳಗಿನ ಸ್ಪರ್ಧಿಗಳು ಹಾಗೂ ಮುಕ್ತ ಪುರುಷ ಮತ್ತು ಮಹಿಳೆಯರ ವಿಭಾಗಗಳಲ್ಲಿ ಒಟ್ಟು 10 ವಿಭಾಗಗಳಿಗೆ 18 ರೇಸ್‌ಗಳನ್ನು ಆಯೋಜಿಸಲಾಗಿದೆ ಎಂದು ಮಾಹಿತಿ ನೀಡಿದರು.

ಸೈಕ್ಲಿಂಗ್ ಕ್ರೀಡೆಯಲ್ಲಿ ರಸ್ತೆ, ಟ್ರ್ಯಾಕ್ ಹಾಗೂ ಮೌಂಟೇನ್ ಬೈಕ್ (ಎಂಟಿಬಿ) ಸ್ಪರ್ಧೆಗಳು ಪ್ರಮುಖವಾಗಿದ್ದು, ಭಾರತ ಈ ವಿಭಾಗದಲ್ಲಿ ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಗಮನಾರ್ಹ ಸಾಧನೆ ಮಾಡಿದೆ ಎಂದು ಹೇಳಿದರು.

## ಹೀಗೆ ಮುಂದುವರಿದರೆ ಕ್ರಮ ಅನಿವಾರ್ಯ: ನಗರಸಭೆ ಅಧಿಕಾರಿಗಳಿಗೆ ಲೋಕಾಯುಕ್ತರ ಛಾಟಿ

# ಕಸ ನಿರ್ವಹಣೆಯಲ್ಲಿ ಎಡವಿದ ನಗರಸಭೆ



**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಳಗಾನೂರ ರಸ್ತೆಯಲ್ಲಿರುವ ಘನ ತ್ಯಾಜ್ಯ (ಕಸ) ನಿರ್ವಹಣಾ ಕೇಂದ್ರಕ್ಕೆ ಗುರುವಾರ ದಿಢೀರ್ ಭೇಟಿ ನೀಡಿದ ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಪಣೀಂದ್ರ ಅವರು, ಕಸ ನಿರ್ವಹಣೆಯಲ್ಲಿನ ಅವ್ಯವಸ್ಥೆ ಕಂಡು ಅಧಿಕಾರಿಗಳನ್ನು ತರಾಟೆಗೆ ತೆಗೆದುಕೊಂಡು, ವೈಜ್ಞಾನಿಕ ಹಾಗೂ ಕಾನೂನುಬದ್ಧ ರೀತಿಯಲ್ಲಿ ತ್ಯಾಜ್ಯ ನಿರ್ವಹಣೆ ನಡೆಸುವಂತೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಕೇಂದ್ರದಲ್ಲಿ ಕಸ ಸಂಗ್ರಹ, ವಿಂಗಡಣೆ ಹಾಗೂ ವಿಲೇವಾರಿ ವ್ಯವಸ್ಥೆಯನ್ನು ಪರಿಶೀಲಿಸಿದ ಅವರು, ನಗರದ ಸ್ವಚ್ಛತೆಗೆ ಮೊದಲ ಆದ್ಯತೆ ನೀಡಬೇಕು. ಮನೆಮನೆಗಳಿಂದ ಸಂಗ್ರಹವಾಗುವ ಕಸವನ್ನು ಸಮರ್ಪಕವಾಗಿ ವಿಂಗಡಿಸಿ ವೈಜ್ಞಾನಿಕ ರೀತಿಯಲ್ಲಿ ವಿಲೇವಾರಿ ಮಾಡುವ ವ್ಯವಸ್ಥೆಯನ್ನು ಕಡ್ಡಾಯವಾಗಿ ಜಾರಿಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು. ಕಸ ನಿರ್ವಹಣೆಯಲ್ಲಿರುವ ಲೋಪದೋಷಗಳನ್ನು ತಕ್ಷಣ ಸರಿಪಡಿಸಿ, ಸುಧಾರಿತ ವ್ಯವಸ್ಥೆ ರೂಪಿಸಬೇಕು. ಉತ್ತಮ ತ್ಯಾಜ್ಯ ನಿರ್ವಹಣಾ ಪದ್ಧತಿಗಳನ್ನು ಅಳವಡಿಸಿಕೊಳ್ಳಲು ನಗರಸಭೆಯ ಅಧಿಕಾರಿಗಳು ಹಾಗೂ ಸಿಬ್ಬಂದಿಯನ್ನು ಮೈಸೂರಿಗೆ ಕಳುಹಿಸಿ ತರಬೇತಿ ನೀಡಬೇಕು. ಅಲ್ಲಿನ ಯಶಸ್ವಿ ಮಾದರಿಯನ್ನು ಅಧ್ಯಯನ ಮಾಡಿ ಗದಗದಲ್ಲೂ ಅನುಷ್ಠಾನಗೊಳಿಸುವಂತೆ ನಿರ್ದೇಶಿಸಿದರು.

ಕಸ ವಿಲೇವಾರಿ ಕೇಂದ್ರದ ಸುತ್ತಮುತ್ತ ಹೊಸ ಬಡಾವಣೆಗಳಿಗೆ ಅವಕಾಶ ನೀಡಬಾರದು. ದುವಾರ್ಸನೆ, ಧೂಳು ಹಾಗೂ ಇತರ ತೊಂದರೆಗಳಿಂದ ರೈತರು, ಸಾರ್ವಜನಿಕರು ಮತ್ತು ರಸ್ತೆ ಸಂಚಾರಿಗಳಿಗೆ ಯಾವುದೇ ಸಮಸ್ಯೆಯಾಗದಂತೆ ಮುನ್ನೆಚ್ಚರಿಕೆ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ಕೇಂದ್ರದಲ್ಲಿ ಕೆಲಸ ಮಾಡುವ ಕಾರ್ಮಿಕರಿಗೆ ಗುಣಮಟ್ಟದ ಮಾಸ್ಕ್, ಬೂಟ್, ಕೈಗವಸು ಸೇರಿದಂತೆ ಅಗತ್ಯ ಸುರಕ್ಷತಾ ಸಾಮಗ್ರಿಗಳನ್ನು ಕಡ್ಡಾಯವಾಗಿ ಒದಗಿಸಬೇಕು. ಅವರ ಆರೋಗ್ಯ ತಪಾಸಣೆ ಹಾಗೂ ಆರೋಗ್ಯ ರಕ್ಷಣೆಗೆ ಕೈಗೊಂಡಿರುವ ಕ್ರಮಗಳ ಕುರಿತು ಮಾಹಿತಿ ಪಡೆದು, ಇನ್ನಷ್ಟು ಪರಿಣಾಮಕಾರಿ ವ್ಯವಸ್ಥೆ ರೂಪಿಸುವಂತೆ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನೆ ವೇಳೆ ಕಳೆದ ಆರು ವರ್ಷಗಳಿಂದ ಕಸ ವಿಲೇವಾರಿ ಯಂತ್ರ ಕೆಟ್ಟು ನಿಂತಿರುವುದು ಗಮನಕ್ಕೆ ಬಂದ ಹಿನ್ನೆಲೆಯಲ್ಲಿ ತೀವ್ರ ಅಸಮಾಧಾನ ವ್ಯಕ್ತಪಡಿಸಿದ ಉಪಲೋಕಾಯುಕ್ತರು, ಇಷ್ಟು ವರ್ಷಗಳಾದರೂ ಯಂತ್ರ ದುರಸ್ತಿಗೊಳಿಸದಿರುವ ಬಗ್ಗೆ ಅಧಿಕಾರಿಗಳನ್ನು ಪ್ರಶ್ನಿಸಿದರು. ತಕ್ಷಣವೇ ಆಧುನಿಕ ತಂತ್ರಜ್ಞಾನ ಹೊಂದಿರುವ ಹೊಸ ಯಂತ್ರ ಖರೀದಿಸಿ ಕಾರ್ಯಾರಂಭ ಮಾಡುವಂತೆ ಸೂಚನೆ ನೀಡಿದರು. ಕಸ ನಿರ್ವಹಣೆ ಸಂಪೂರ್ಣವಾಗಿ ಪರಿಸರ ಸ್ನೇಹಿ ಹಾಗೂ ಕಾನೂನುಬದ್ಧ ರೀತಿಯಲ್ಲಿ ನಡೆಯಬೇಕು. ಸಾರ್ವಜನಿಕ ಆರೋಗ್ಯ ಮತ್ತು ಪರಿಸರ ಸಂರಕ್ಷಣೆಗೆ ಯಾವುದೇ ಧಕ್ಕೆಯಾಗದಂತೆ ವ್ಯವಸ್ಥೆ ರೂಪಿಸುವುದು ನಗರಸಭೆಯ ಜವಾಬ್ದಾರಿಯಾಗಿದೆ ಎಂದು ಹೇಳಿದರು.

ಪರಿಶೀಲನೆ ವೇಳೆ ಹಿರಿಯ ನ್ಯಾಯಾಧೀಶರು ಹಾಗೂ ಆಪ್ತ ಕಾರ್ಯದರ್ಶಿ ಕಿರಣ್ ಪಿ.ಎಂ. ಪಾಟೀಲ, ಸುನೀಲಕುಮಾರ ಆರ್. ಉಪಸ್ಥಿತರಿದ್ದರು. ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಸಿ.ಎಸ್. ಶಿವನಗೌಡರ, ಉಪವಿಭಾಗಾಧಿಕಾರಿ ಗಂಗಪ್ಪ ಎಂ., ಲೋಕಾಯುಕ್ತ ಪೊಲೀಸ್ ಅಧೀಕ್ಷಕ ಸಿದ್ದಲಿಂಗಪ್ಪ, ಉಪಾಧೀಕ್ಷಕ ಲೋಕೇಶ್, ಡಿಯುಡಿಸಿ ಯೋಜನಾ ನಿರ್ದೇಶಕ ಬಸನಗೌಡ ಕೊಟೂರ, ಪರಿಸರ ಅಭಿಯಂತರ ಆನಂದ ಬದಿ, ನಗರಸಭೆ ಆಯುಕ್ತ ರಾಜಾರಾಮ ಪವಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

> **ಕಸ ನಿರ್ವಹಣೆ ನಿರ್ಲಕ್ಷ್ಯದ ವಿಷಯವಲ್ಲ. ವೈಜ್ಞಾನಿಕ ಹಾಗೂ ಪರಿಸರ ಸ್ನೇಹಿ ವ್ಯವಸ್ಥೆ ಜಾರಿಯಾಗಬೇಕು. ಸಾರ್ವಜನಿಕ ಆರೋಗ್ಯಕ್ಕೆ ಧಕ್ಕೆ ಉಂಟುಮಾಡುವ ಯಾವುದೇ ಲೋಪ ಸಹಿಸಲಾಗುವುದಿಲ್ಲ.**
> **– ನ್ಯಾ. ಕೆ.ಎನ್. ಪಣೀಂದ್ರ,** ಕರ್ನಾಟಕ ಉಪಲೋಕಾಯುಕ್ತ

## ನಗರಸಭೆ ಸದಸ್ಯರು ರಾಜೀನಾಮೆ ನಿರ್ಧಾರ ಮರುಪರಿಶೀಲಿಸಲಿ

**ವಿಜಯಸಾಕ್ಷಿ ಸುದ್ದಿ, ಗದಗ**

ಸಚಿವ ಸಂಪುಟ ವಿಸ್ತರಣೆಯಲ್ಲಿ ಗದಗ ಶಾಸಕ ಹಾಗೂ ಮಾಜಿ ಸಚಿವ ಡಾ. ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಸಿಗದಿರುವುದು ಜಿಲ್ಲೆಯ ಜನರಲ್ಲಿ ಬೇಸರ ಮೂಡಿಸಿದೆ.

ಆದರೆ ಈ ಹಿನ್ನೆಲೆಯಲ್ಲಿ ನಗರಸಭೆ ಸದಸ್ಯರು ರಾಜೀನಾಮೆ ನೀಡಿರುವ ನಿರ್ಧಾರವನ್ನು ಆತ್ಮಾವಲೋಕನ ಮಾಡಿಕೊಳ್ಳಬೇಕು ಎಂದು ಸಾಮಾಜಿಕ ಚಿಂತಕ ವಿಶ್ವನಾಥ ಶೀರಿ ಮನವಿ ಮಾಡಿದ್ದಾರೆ.

ಈ ಕುರಿತು ಪ್ರಕಟಣೆ ನೀಡಿರುವ ಅವರು, ಎಚ್.ಕೆ. ಪಾಟೀಲ ಅವರು ಸಚಿವರಾಗದಿದ್ದರೂ ಸರ್ಕಾರದ ವಿವಿಧ ಇಲಾಖೆಗಳೊಂದಿಗೆ ಹೊಂದಿರುವ ಅನುಭವ, ಪ್ರಭಾವ ಮತ್ತು ಕಾರ್ಯಕ್ಷಮತೆಯಿಂದ ಜಿಲ್ಲೆಯ ಅಭಿವೃದ್ಧಿಗೆ ಇನ್ನಷ್ಟು ಪರಿಣಾಮಕಾರಿಯಾಗಿ ಕೆಲಸ ಮಾಡುವ ಸಾಮರ್ಥ್ಯ ಹೊಂದಿದ್ದಾರೆ ಎಂದು ಹೇಳಿದ್ದಾರೆ.




ನಗರಸಭೆ ಸದಸ್ಯರು ರಾಜೀನಾಮೆ ನೀಡುವ ಬದಲು ತಮ್ಮ ನಾಯಕತ್ವದ ಮಾರ್ಗದರ್ಶನದಲ್ಲಿ ನಗರ ಹಾಗೂ ಜಿಲ್ಲೆಯ ಅಭಿವೃದ್ಧಿಗೆ ಹೆಚ್ಚಿನ ಒತ್ತು ನೀಡಬೇಕು. ಜನರು ನೀಡಿರುವ ಜನಾದೇಶವನ್ನು ಗೌರವಿಸಿ ಸಾರ್ವಜನಿಕ ಸೇವೆಯನ್ನು ಮುಂದುವರಿಸಬೇಕು ಎಂದು ಅವರು ಅಭಿಪ್ರಾಯಪಟ್ಟಿದ್ದಾರೆ. ಪಕ್ಷದ ಸಂಘಟನೆ ಬಲಪಡಿಸಿ, ಮುಂದಿನ ಚುನಾವಣೆಯಲ್ಲಿ ಇನ್ನಷ್ಟು ಬಲಿಷ್ಠವಾಗಿ ಹೊರಹೊಮ್ಮುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸುವುದು ಸೂಕ್ತ. ಜನರ ವಿಶ್ವಾಸ ಉಳಿಸಿಕೊಂಡು ಅಭಿವೃದ್ಧಿ ಕಾರ್ಯಗಳಿಗೆ ವೇಗ ನೀಡುವುದು ಜನಪ್ರತಿನಿಧಿಗಳ ಆದ್ಯ ಕರ್ತವ್ಯವಾಗಬೇಕು ಎಂದು ಅವರು ತಿಳಿಸಿದ್ದಾರೆ.

> **ನಾಯಕನಿಗೆ ಬಲ ತುಂಬುವ ನಿರ್ಧಾರಗಳೇ ಜನಪ್ರತಿನಿಧಿಗಳಿಂದ ಬರಬೇಕು. ರಾಜೀನಾಮೆಗಿಂತ ಅಭಿವೃದ್ಧಿಗೆ ಕೈಜೋಡಿಸುವುದು ಜನಾದೇಶಕ್ಕೆ ಗೌರವ ಸಲ್ಲಿಸಿದಂತಾಗುತ್ತದೆ.**
> **– ವಿಶ್ವನಾಥ ಶೀರಿ,** ಸಾಮಾಜಿಕ ಚಿಂತಕ

## ಭೀಷ್ಮ ಕೆರೆಯ ದುಸ್ಥಿತಿ ಕಂಡು ಗರಂ ಆದ ಉಪಲೋಕಾಯುಕ್ತರು

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಪಣೀಂದ್ರ ಅವರು ಗುರುವಾರ ನಗರದ ಐತಿಹಾಸಿಕ ಭೀಷ್ಮ ಕೆರೆಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಕೆರೆಗೆ ಚರಂಡಿ ನೀರು ಸೇರುತ್ತಿರುವುದನ್ನು ಗಮನಿಸಿದ ಅವರು, ಅದನ್ನು ತಕ್ಷಣ ತಡೆಗಟ್ಟಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.



ಅಧಿಕಾರಿಗಳು ಕೇವಲ ಕರ್ತವ್ಯ ನಿರ್ವಹಿಸುವುದಲ್ಲ, ಸಾರ್ವಜನಿಕ ಹಿತದೃಷ್ಟಿಯಿಂದ ಮನಸಾರೆ ಕೆಲಸ ಮಾಡುವ ಉತ್ಸಾಹ ತೋರಬೇಕು ಎಂದು ಅವರು ಹೇಳಿದರು. ಭೀಷ್ಮ ಕೆರೆಯ ಅಧಿಕೃತ ಅಳತೆ ಮಾಡಿಸಿ ಗಡಿ ಗುರುತಿಸಬೇಕು.

ನಿರ್ಬಂಧಿತ ಪ್ರದೇಶದಲ್ಲಿ ಯಾವುದೇ ರೀತಿಯ ವಸತಿ ಅಥವಾ ಅಕ್ರಮ ನಿರ್ಮಾಣಕ್ಕೆ ಅವಕಾಶ ನೀಡಬಾರದು ಎಂದು ಸ್ಪಷ್ಟ ನಿರ್ದೇಶನ ನೀಡಿದರು.

ಕೆರೆಗೆ ಸೇರುತ್ತಿರುವ ಚರಂಡಿ ನೀರಿನ ಸಮಸ್ಯೆಗೆ ಶಾಶ್ವತ ಪರಿಹಾರ ಕಲ್ಪಿಸಲು ತಕ್ಷಣವೇ ಒಳಚರಂಡಿ ಶುದ್ಧೀಕರಣ ಘಟಕ (ಎಸ್‌ಟಿಪಿ) ಯೋಜನೆ ರೂಪಿಸಿ ಅನುಷ್ಠಾನಗೊಳಿಸುವಂತೆ ಸೂಚಿಸಿದರು.

ಈ ವಿಷಯದಲ್ಲಿ ನಿರ್ಲಕ್ಷ್ಯ ತೋರಿದರೆ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಪ್ರಕರಣ ದಾಖಲಿಸುವ ಎಚ್ಚರಿಕೆ ನೀಡಿದ ಉಪಲೋಕಾಯುಕ್ತರು, ಸಮಸ್ಯೆ ಸಂಪೂರ್ಣವಾಗಿ ಬಗೆಹರಿಯುವವರೆಗೆ ಪರಿಶೀಲನೆ ಮತ್ತು ಕ್ರಮ ಮುಂದುವರಿಯಲಿದೆ ಎಂದು ಹೇಳಿದರು.

## ಎಚ್.ಕೆ. ಪಾಟೀಲರಿಗೆ ಸಚಿವ ಸ್ಥಾನ ತಪ್ಪಿದ್ದಕ್ಕೆ ಹೆದ್ದಾರಿ ತಡೆದು ಪ್ರತಿಭಟನೆ

**ವಿಜಯಸಾಕ್ಷಿ ಸುದ್ದಿ, ಶಿರಹಟ್ಟಿ**

ಮಾಜಿ ಸಚಿವ ಹಾಗೂ ಗದಗ ಶಾಸಕ ಎಚ್.ಕೆ. ಪಾಟೀಲ ಅವರಿಗೆ ಸಚಿವ ಸ್ಥಾನ ಕೈತಪ್ಪಿರುವುದನ್ನು ಖಂಡಿಸಿ ಶಿರಹಟ್ಟಿ ತಾಲೂಕಿನ ತಂಗೋಡ ಗ್ರಾಮದಲ್ಲಿ ಗುರುವಾರ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರು ರಾಜ್ಯ ಹೆದ್ದಾರಿ ತಡೆದು ಪ್ರತಿಭಟನೆ ನಡೆಸಿದರು.



ಪ್ರತಿಭಟನೆಯಲ್ಲಿ ಮಾತನಾಡಿದ ಕಾಂಗ್ರೆಸ್ ಮುಖಂಡ ಡಿ.ಕೆ. ಹೊನ್ನಪ್ಪನವರ, ವಿದ್ಯಾರ್ಥಿ ದಶೆಯಿಂದಲೇ ಪಕ್ಷಕ್ಕಾಗಿ ದುಡಿದಿರುವ ಎಚ್.ಕೆ. ಪಾಟೀಲ ಅವರು ಕೃಷಿ, ಗ್ರಾಮೀಣಾಭಿವೃದ್ಧಿ ಹಾಗೂ ಬೃಹತ್ ನೀರಾವರಿ ಸಚಿವರಾಗಿ ರಾಜ್ಯಕ್ಕೆ ಮಹತ್ವದ ಕೊಡುಗೆ ನೀಡಿದ್ದಾರೆ.

ಗ್ರಾಮೀಣಾಭಿವೃದ್ಧಿ ವಿಶ್ವವಿದ್ಯಾಲಯ ಸ್ಥಾಪನೆ ಸೇರಿದಂತೆ ಉತ್ತರ ಕರ್ನಾಟಕದ ಅಭಿವೃದ್ಧಿಗೆ ವಿಶೇಷ ಶ್ರಮ ವಹಿಸಿದ್ದಾರೆ ಎಂದು ಹೇಳಿದರು.

ಇಂತಹ ಅನುಭವಿ, ಪ್ರಾಮಾಣಿಕ ಹಾಗೂ ಪಕ್ಷನಿಷ್ಠ ನಾಯಕರಿಗೆ ಮೊದಲ ಹಂತದಲ್ಲೇ ಸಚಿವ ಸ್ಥಾನ ನೀಡಬೇಕಾಗಿತ್ತು. ಅವರಿಗೆ ಸಚಿವ ಸ್ಥಾನ ನೀಡದಿರುವುದು ವೈಯಕ್ತಿಕ ಅನ್ಯಾಯ ಮಾತ್ರವಲ್ಲ, ಕಾಂಗ್ರೆಸ್ ಪಕ್ಷಕ್ಕೂ ಹಿನ್ನಡೆಯಾಗಿದೆ. ಈ ಅನ್ಯಾಯದ ವಿರುದ್ಧ ಯಾವುದೇ ತ್ಯಾಗಕ್ಕೂ ಸಿದ್ಧರಿದ್ದೇವೆ ಎಂದು ಎಚ್ಚರಿಸಿದರು. ಪ್ರತಿಭಟನೆಯಲ್ಲಿ ಫಕ್ಕೀರೇಶ ಮ್ಯಾಟಣ್ಣವರ, ಫಕ್ಕೀರೇಶ ನಡುವಿನಕೇರಿ, ಮುತ್ತು ಮುಂಡವಾಡ, ಶಿವು ಮಠದ, ರುದ್ರಗೌಡ ಪಾಟೀಲ, ಕಲವೀರಪ್ಪ ಚೌಢಾಳ, ಸುರೇಶ ತಳ್ಳಳ್ಳಿ, ಗುಡ್ಡಪ್ಪ ಬ್ಯಾಲಹುಣಸಿ, ಮಾರ್ತಂಡಪ್ಪ ಪೆದ್ದರ, ಸಂಜೀವರಡ್ಡಿ ವೆಂಕರಡ್ಡಿ, ನೇಮಣ್ಣ ನಾಯಕ, ಶರಣಪ್ಪ ಬೆಳ್ಳಟ್ಟಿ, ಮುದಕನಗೌಡ ಪಾಟೀಲ, ರಾಜು ಹತ್ತಿಕಾಳ, ಬಸವರಾಜ ಗುಳ್ಳಣ್ಣವರ, ಸಂಗಪ್ಪ ಹುರಕಣ್ಣವರ ಸೇರಿದಂತೆ ಹಲವರು ಭಾಗವಹಿಸಿದ್ದರು.

## ಹೊಸ ಬಸ್ ನಿಲ್ದಾಣಕ್ಕೆ ಉಪಲೋಕಾಯುಕ್ತರ ದಿಢೀರ್ ಭೇಟಿ

**ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಉಪಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಪಣೀಂದ್ರ ಅವರು ಗುರುವಾರ ನಗರದ ಹೊಸ ಬಸ್ ನಿಲ್ದಾಣಕ್ಕೆ ದಿಢೀರ್ ಭೇಟಿ ನೀಡಿ, ಅಲ್ಲಿನ ಮೂಲಸೌಕರ್ಯ ಹಾಗೂ ಸಾರ್ವಜನಿಕರಿಗೆ ಒದಗಿಸಲಾಗುತ್ತಿರುವ ಸೇವೆಗಳ ಕುರಿತು ಪರಿಶೀಲನೆ ನಡೆಸಿದರು. ಈ ವೇಳೆ ಬಸ್ ನಿಲ್ದಾಣದಲ್ಲಿರುವ ಕುಡಿಯುವ ನೀರಿನ ಘಟಕವನ್ನು ಪರಿಶೀಲಿಸಿದ ಅವರು, ಸಾರ್ವಜನಿಕರಿಗೆ ಪೂರೈಕೆಯಾಗುತ್ತಿರುವ ನೀರನ್ನು ತಕ್ಷಣ ಪರೀಕ್ಷೆಗೆ ಒಳಪಡಿಸಿ, ಅದು ಕುಡಿಯಲು ಯೋಗ್ಯವೇ ಎಂಬ ಕುರಿತು ವರದಿ ಸಲ್ಲಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಿದರು. ಬಳಿಕ ಪ್ರಯಾಣಿಕರೊಂದಿಗೆ ನೇರವಾಗಿ ಸಂವಾದ ನಡೆಸಿದ ಉಪಲೋಕಾಯುಕ್ತರು, ಬಸ್ ನಿಲ್ದಾಣದಲ್ಲಿನ ಸ್ವಚ್ಛತೆ, ಕುಡಿಯುವ ನೀರು, ಆಸನ ವ್ಯವಸ್ಥೆ ಸೇರಿದಂತೆ ಮೂಲಭೂತ ಸೌಲಭ್ಯಗಳ ಕುರಿತು ಮಾಹಿತಿ ಪಡೆದು, ಅವುಗಳನ್ನು ಸಮರ್ಪಕವಾಗಿ ನಿರ್ವಹಿಸುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು. ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರಿಗೆ ಬಸ್‌ಗಳು ನಿಗದಿತ ವೇಳಾಪಟ್ಟಿಯಂತೆ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು. ಸಾರ್ವಜನಿಕ ಸೇವೆಯಲ್ಲಿ ಯಾವುದೇ ರೀತಿಯ ವಿಳಂಬ ಅಥವಾ ನಿರ್ಲಕ್ಷ್ಯ ಕಂಡುಬರಬಾರದು ಎಂದು ಅವರು ಅಧಿಕಾರಿಗಳಿಗೆ ಎಚ್ಚರಿಕೆ ನೀಡಿದರು.



> **ಸಾರ್ವಜನಿಕರಿಗೆ ಸುರಕ್ಷಿತ ಕುಡಿಯುವ ನೀರು, ಸ್ವಚ್ಛ ವಾತಾವರಣ ಹಾಗೂ ಸಮಯಕ್ಕೆ ಸೇವೆ ಒದಗಿಸುವುದು ಸಂಬಂಧಪಟ್ಟ ಇಲಾಖೆಯ ಮೊದಲ ಜವಾಬ್ದಾರಿ.**
> **– ನ್ಯಾ. ಕೆ.ಎನ್. ಪಣೀಂದ್ರ,** ಕರ್ನಾಟಕ ಉಪಲೋಕಾಯುಕ್ತ

## ಸಂಕ್ಷಿಪ್ತ ಸುದ್ದಿಗಳು

### ಅಂಚೆ ಕಚೇರಿ ಫ್ರಾಂಚೈಸಿಗೆ ಅರ್ಜಿ ಆಹ್ವಾನ

**ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಅಂಚೆ ವಿಭಾಗದ ವ್ಯಾಪ್ತಿಯಲ್ಲಿ ಅಂಚೆ ಕಚೇರಿ ಫ್ರಾಂಚೈಸಿ (ಕಟಠರಿ ಣ್ಞಜ್ಜಿಛಿ ಊಟ್ಚಜ್ಞಜಿಠಿಛಿ) ಮಳಿಗೆಗಳನ್ನು ಆರಂಭಿಸಲು ಅರ್ಹ ವ್ಯಕ್ತಿಗಳು, ಸ್ವಸಹಾಯ ಸಂಘಗಳು, ಸಹಕಾರ ಸಂಘಗಳು, ಸಂಸ್ಥೆಗಳು ಹಾಗೂ ಆಸಕ್ತ ಉದ್ಯಮಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಭಾರತ ಸರ್ಕಾರದ ಅಂಚೆ ಇಲಾಖೆಯ ಈ ಯೋಜನೆಯಡಿ ಆಯ್ಕೆಯಾಗುವ ಫ್ರಾಂಚೈಸಿದಾರರು ಸ್ಪೀಡ್ ಪೋಸ್ಟ್, ನೋಂದಾಯಿತ ಅಂಚೆ ಬುಕ್ಕಿಂಗ್, ಅಂಚೆ ಚೀಟಿ, ಲಕೋಟೆ ಹಾಗೂ ಇತರೆ ಅಂಚೆ ಸಾಮಗ್ರಿಗಳ ಮಾರಾಟ ಸೇರಿದಂತೆ ವಿವಿಧ ಅಂಚೆ ಸೇವೆಗಳನ್ನು ಸಾರ್ವಜನಿಕರಿಗೆ ಒದಗಿಸಲಿದ್ದು, ಸೇವೆಗಳ ಆಧಾರದ ಮೇಲೆ ಇಲಾಖೆಯಿಂದ ನಿಗದಿತ ಕಮಿಷನ್ ಪಡೆಯಲಿದ್ದಾರೆ.

ಅರ್ಜಿದಾರರು ಭಾರತೀಯ ಪ್ರಜೆಯಾಗಿದ್ದು, ಕನಿಷ್ಠ 18 ವರ್ಷ ವಯಸ್ಸು ಪೂರ್ಣಗೊಳಿಸಿರಬೇಕು. ಕಂಪ್ಯೂಟರ್‌ನ ಮೂಲಭೂತ ಜ್ಞಾನ ಹಾಗೂ ಫ್ರಾಂಚೈಸಿ ನಡೆಸಲು ಅಗತ್ಯ ಮೂಲಸೌಕರ್ಯ ಹೊಂದಿರಬೇಕು. ಅರ್ಜಿಯೊಂದಿಗೆ ಗುರುತಿನ ಚೀಟಿ, ವಿಳಾಸದ ಪುರಾವೆ, ಪ್ಯಾನ್ ಕಾರ್ಡ್, ಭಾವಚಿತ್ರ ಹಾಗೂ ಇತರೆ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು.

ಅರ್ಜಿ ನಮೂನೆಯನ್ನು ಗದಗ ಅಂಚೆ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಪಡೆದು, ಭರ್ತಿ ಮಾಡಿದ ಅರ್ಜಿಯನ್ನು ಅಂಚೆ ಅಧೀಕ್ಷಕರು, ಗದಗ ಅಂಚೆ ವಿಭಾಗ, ಗದಗ582101 ವಿಳಾಸಕ್ಕೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ: 7975636514 ಅಥವಾ ಸಮೀಪದ ಅಂಚೆ ಕಚೇರಿಯನ್ನು ಸಂಪರ್ಕಿಸಬಹುದು ಎಂದು ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ನಾಳೆ ಕಾಮಿಡಿ ಕಿಲಾಡಿಗಳು ಖ್ಯಾತಿಯ ಕಲಾವಿದರಿಂದ ನಗೆಹಬ್ಬ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಶ್ರೀ ರಂಭಾಪುರಿ ಕಲ್ಯಾಣ ಮಂಟಪದಲ್ಲಿ ಆಗಸ್ಟ್ 8ರಂದು ಸಂಜೆ 5 ಗಂಟೆಗೆ 'ಗೀತ ಸ್ಯಂಪಿಗೆಹಾಸ್ಯ ಮಲ್ಲಿಗೆ2026' ಸಂಗೀತ ಮತ್ತು ಹಾಸ್ಯ ರಸಮಂಜರಿ ಕಾರ್ಯಕ್ರಮ ನಡೆಯಲಿದೆ.

ಶಿರಹಟ್ಟಿ ಕ್ಷೇತ್ರದ ಶಾಸಕ ಡಾ. ಚಂದ್ರು ಲಮಾಣಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಮಾಜಿ ಶಾಸಕ ಜಿ.ಎಂ. ಮಹಾಂತಶೆಟ್ಟರ ಅಧ್ಯಕ್ಷತೆ ವಹಿಸಲಿದ್ದಾರೆ. ಮಾಜಿ ಶಾಸಕರಾದ ಜಿ.ಎಸ್. ಗಡ್ಡದೇವರಮಠ, ರಾಮಣ್ಣ ಲಮಾಣಿ ಸೇರಿದಂತೆ ವಿವಿಧ ಕ್ಷೇತ್ರಗಳ ಗಣ್ಯರು ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ.

ಕಾರ್ಯಕ್ರಮದಲ್ಲಿ 'ಕಾಮಿಡಿ ಕಿಲಾಡಿಗಳು' ಖ್ಯಾತಿಯ ಹಾಸ್ಯ ಕಲಾವಿದರಾದ ನಯನಾ, ರಘು, ವಿಠ್ಠಲ್, ಬಸವರಾಜ್ ಹಾಗೂ ಗಾಯಕರುಗಳಾದ ವಾಸು, ಚೇತನ್, ನಂದಿತಾ, ಸ್ಫೂರ್ತಿ ಸೇರಿದಂತೆ ಹಲವು ಕಲಾವಿದರು ಭಾಗವಹಿಸಿ ಹಾಸ್ಯ ಮತ್ತು ಸಂಗೀತದ ರಸದೌತಣ ಉಣಬಡಿಸಲಿದ್ದಾರೆ ಎಂದು ಸಂಘಟಕ ವಾಸು ಬೋಮಲೆ ತಿಳಿಸಿದ್ದಾರೆ.

### ಇಂದು ಉಚಿತ ನೇತ್ರ ತಪಾಸಣೆ

**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಶ್ರೀ ಗುರು ಮಹಿಪತಿರಾಜ ಸಂಸ್ಥೆ, ಹುಬ್ಬಳ್ಳಿ, ಡಾ. ಎಂ.ಎ. ಜೋಶಿ ನೇತ್ರ ವಿಜ್ಞಾನ ಸಂಸ್ಥೆ, ಕರ್ನಾಟಕ ರಾಜ್ಯ ಹಿರಿಯ ನಾಗರಿಕರ ಹಾಗೂ ನಿವೃತ್ತ ನೌಕರರ ಸಂಘದ ಲಕ್ಷ್ಮೇಶ್ವರ ತಾಲೂಕು ಘಟಕ, ತಾಲೂಕು ವೈದ್ಯರ ಸಂಘ, ಜಿಲ್ಲಾ ಅಂಧತ್ವ ನಿಯಂತ್ರಣ ಕಾರ್ಯಕ್ರಮ ಹಾಗೂ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಬಿಸಿ ಟ್ರಸ್ಟ್ ಇವರ ಸಂಯುಕ್ತ ಆಶ್ರಯದಲ್ಲಿ ಆಗಸ್ಟ್ 7ರಂದು ಉಚಿತ ನೇತ್ರ ತಪಾಸಣೆ ಮತ್ತು ಶಸ್ತ್ರಚಿಕಿತ್ಸೆ ಶಿಬಿರ ನಡೆಯಲಿದೆ. ಶಿಬಿರವು ಬೆಳಿಗ್ಗೆ 10ರಿಂದ ಮಧ್ಯಾಹ್ನ 2 ಗಂಟೆಯವರೆಗೆ ಲಕ್ಷ್ಮೇಶ್ವರದ ಜ್ಯೋತಿ ನರ್ಸಿಂಗ್ ಹೋಂ (ಡಾ. ಪಿ.ಡಿ. ತೋಟದ ಆಸ್ಪತ್ರೆ)ಯಲ್ಲಿ ನಡೆಯಲಿದೆ. ಕಣ್ಣಿನ ವಿವಿಧ ಸಮಸ್ಯೆಗಳಿಗೆ ತಪಾಸಣೆ ನಡೆಸಿ, ಅಗತ್ಯವಿರುವವರಿಗೆ ಚಿಕಿತ್ಸೆ ಹಾಗೂ ಶಸ್ತ್ರಚಿಕಿತ್ಸೆಗೆ ಆಯ್ಕೆ ಮಾಡಲಾಗುವುದು. ಹೃದಯ ಸಂಬಂಧಿ ಕಾಯಿಲೆ, ಮಧುಮೇಹ ಹಾಗೂ ರಕ್ತದೊತ್ತಡ ಇರುವವರು ತಮ್ಮ ವೈದ್ಯಕೀಯ ವರದಿಗಳನ್ನು ತರಬೇಕು. ಜೊತೆಗೆ ಇತ್ತೀಚಿನ ಎರಡು ಪಾಸ್‌ಪೋರ್ಟ್ ಗಾತ್ರದ ಭಾವಚಿತ್ರ, ಆಧಾರ್ ಕಾರ್ಡ್ ಹಾಗೂ ರೇಷನ್ ಕಾರ್ಡ್‌ನ ತಲಾ ಎರಡು ಜೆರಾಕ್ಸ್ ಪ್ರತಿಗಳನ್ನು ಕಡ್ಡಾಯವಾಗಿ ತರಬೇಕೆಂದು ಸಂಘಟಕರು ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ ಡಾ. ಪಿ.ಡಿ. ತೋಟದ (ಮೊ. 8310779600) ಅಥವಾ ಸಿ.ಆರ್. ಲಕ್ಕುಂಡಿಮಠ (ಮೊ. 9019543555) ಅವರನ್ನು ಸಂಪರ್ಕಿಸಬಹುದಾಗಿದೆ.

### ಎಸ್‌ಐಆರ್: 7.81 ಲಕ್ಷ ಎನ್ಯುಮರೇಷನ್ ಫಾರ್ಮ್ ಡಿಜಿಟಲೀಕರಣ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯಲ್ಲಿ ನಡೆಯುತ್ತಿರುವ ಮತದಾರರ ಪಟ್ಟಿ ವಿಶೇಷ ಸಮಗ್ರ ಪರಿಷ್ಕರಣೆ (ಎಸ್‌ಐಆರ್) ಪ್ರಕ್ರಿಯೆ ವೇಗ ಪಡೆದುಕೊಂಡಿದ್ದು, ಆಗಸ್ಟ್ 4ರವರೆಗೆ 7,81,598 ಎನ್ಯುಮರೇಷನ್ ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.ಜಿಲ್ಲೆಯಲ್ಲಿ ಒಟ್ಟು 9,02,947 ಮತದಾರರು ಹಾಗೂ 967 ಮತಗಟ್ಟೆಗಳು ಇದ್ದು, ಭಾರತೀಯ ಚುನಾವಣಾ ಆಯೋಗದ ನಿರ್ದೇಶನದಂತೆ ಬೂತ್ ಮಟ್ಟದ ಅಧಿಕಾರಿಗಳು (ಬಿ.ಎಲ್.ಓ.) ಮನೆ-ಮನೆಗೆ ಭೇಟಿ ನೀಡಿ ಮತದಾರರಿಗೆ ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸುತ್ತಿದ್ದಾರೆ.ಆಗಸ್ಟ್ 4ರ ವೇಳೆಗೆ 9,02,947 ಎನ್ಯುಮರೇಷನ್ ಫಾರ್ಮ್‌ಗಳನ್ನು ವಿತರಿಸಲಾಗಿದ್ದು, ಅವುಗಳಲ್ಲಿ 7,81,598 ಫಾರ್ಮ್‌ಗಳನ್ನು ಡಿಜಿಟಲೀಕರಣ ಮಾಡಲಾಗಿದೆ. ಮತದಾರರಿಗೆ ಫಾರ್ಮ್ ವಿತರಿಸುವ ಕಾರ್ಯವನ್ನು ಆಗಸ್ಟ್ 8ರವರೆಗೆ ವಿಸ್ತರಿಸಲಾಗಿದೆ ಎಂದು ಜಿಲ್ಲಾಡಳಿತ ಪ್ರಕಟಣೆಯಲ್ಲಿ ತಿಳಿಸಿದೆ.

### ಪ್ರಜಾಪ್ರಭುತ್ವದ ಪಾಠಕ್ಕೆ ಶಾಲೆಯಲ್ಲೇ ಪ್ರಾಯೋಗಿಕ ವೇದಿಕೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಪಿ.ಎಸ್.ಎಸ್. ಡಾ. ಕೆ.ಬಿ. ಧನ್ನೂರ ಆಂಗ್ಲ ಮಾಧ್ಯಮ ಪ್ರೌಢಶಾಲೆಯಲ್ಲಿ ಶಾಲಾ ಸಂಸತ್ ರಚನೆಗಾಗಿ ನೈಜ ಚುನಾವಣೆಯ ಮಾದರಿಯಲ್ಲಿ ಶಾಲಾ ಸಂಸತ್ ಚುನಾವಣೆ ಯಶಸ್ವಿಯಾಗಿ ನಡೆಯಿತು.

ವಿದ್ಯಾರ್ಥಿಗಳಿಗೆ ಪ್ರಜಾಪ್ರಭುತ್ವ ವ್ಯವಸ್ಥೆ, ಶಾಸಕಾಂಗದ ರಚನೆ ಹಾಗೂ ಮತದಾನದ ಮಹತ್ವವನ್ನು ಪರಿಚಯಿಸುವ ಉದ್ದೇಶದಿಂದ ಆಯೋಜಿಸಿದ್ದ ಚುನಾವಣೆಯಲ್ಲಿ ನಾಮಪತ್ರ ಸಲ್ಲಿಕೆ, ಪರಿಶೀಲನೆ, ಪ್ರಚಾರ, ಮತದಾನ ಹಾಗೂ ಮತ ಎಣಿಕೆ ಸೇರಿದಂತೆ ಎಲ್ಲ ಪ್ರಕ್ರಿಯೆಗಳನ್ನು ಚುನಾವಣಾ ಆಯೋಗದ ಮಾದರಿಯಲ್ಲೇ ನಡೆಸಲಾಯಿತು.

---

### ಮಹಿಳಾ ಸಬಲೀಕರಣಕ್ಕೆ ಹೊಸ ಚೈತನ್ಯ ತುಂಬಿದ ಹೋರಾಟಗಾರ್ತಿ

# ಮಾತಲ್ಲ... ಕಾರ್ಯದಲ್ಲೇ ಗುರುತಾದ ಡಾ. ನಾಗಲಕ್ಷ್ಮಿ ಚೌಧರಿ

ಸಮಾಜದಲ್ಲಿ ಕೆಲವರು ಕೇವಲ ಹುದ್ದೆಯಿಂದ ಗುರುತಿಸಿಕೊಳ್ಳುತ್ತಾರೆ. ಆದರೆ ಕೆಲವರು ತಮ್ಮ ಸೇವೆ, ಸರಳತೆ ಮತ್ತು ಸಮಾಜಮುಖಿ ಕಾರ್ಯಗಳ ಮೂಲಕ ಹುದ್ದೆಗೇ ಗೌರವ ತಂದುಕೊಡುತ್ತಾರೆ. ಅಂತಹ ಅಪರೂಪದ ವ್ಯಕ್ತಿತ್ವಗಳಲ್ಲಿ ಕರ್ನಾಟಕ ರಾಜ್ಯ ಮಹಿಳಾ ಆಯೋಗದ ಅಧ್ಯಕ್ಷೆ ಡಾ. ನಾಗಲಕ್ಷ್ಮಿ ಚೌಧರಿ ಅವರು ಪ್ರಮುಖರು.

ವೈದ್ಯೆಯಾಗಿಯೂ, ಸಮಾಜಸೇವಕಿಯಾಗಿಯೂ, ಮಹಿಳಾ ಹೋರಾಟಗಾರ್ತಿಯಾಗಿಯೂ ಗುರುತಿಸಿಕೊಂಡಿರುವ ಅವರು, ತಮ್ಮ ಮಾತಿಗಿಂತ ಕಾರ್ಯಗಳ ಮೂಲಕವೇ ಜನರ ಮನಸ್ಸು ಗೆದ್ದಿದ್ದಾರೆ. ಯಾವುದೇ ಜವಾಬ್ದಾರಿ ವಹಿಸಿಕೊಂಡರೂ ಅದನ್ನು ಜನಸೇವೆಯ ಅವಕಾಶವೆಂದು ಪರಿಗಣಿಸುವ ಅವರ ಕಾರ್ಯವೈಖರಿ ಎಲ್ಲರಿಗೂ ಮಾದರಿಯಾಗಿದೆ.

ತಂದೆಯ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಂಡಿರುವ ಡಾ. ನಾಗಲಕ್ಷ್ಮಿ ಚೌಧರಿ ಅವರು ಇಂದು ರಾಜ್ಯದ



ಸಾವಿರಾರು ಮಹಿಳೆಯರ ವಿಶ್ವಾಸದ ಧ್ವನಿಯಾಗಿ ಹೊರಹೊಮ್ಮಿದ್ದಾರೆ. ಗ್ರಾಮೀಣ ಭಾಗದಲ್ಲಿಯೂ ನ್ಯಾಯ, ಸಮಾನತೆ ಮತ್ತು ಮಾನವೀಯತೆಯ ಮೌಲ್ಯಗಳನ್ನು ಬೆಳೆಸಿದ ತಮ್ಮ ತಂದೆಯ ಹಾದಿಯಲ್ಲಿಯೇ ಅವರು ಸಾಗುತ್ತಿ ರುವುದು ಗಮನಾರ್ಹ.

ವೈದ್ಯಕೀಯ ವೃತ್ತಿಯಲ್ಲಿ ಸೇವೆ ಸಲ್ಲಿಸಿದ ನಂತರ ಸಾರ್ವಜನಿಕ ಜೀವನಕ್ಕೆ ಕಾಲಿಟ್ಟ ಅವರು, ಮಹಿಳಾ ಆಯೋಗದ ಅಧ್ಯಕ್ಷೆಯಾಗಿ ಮಹಿಳೆಯರ ಸುರಕ್ಷತೆ, ಆರೋಗ್ಯ, ಕಾನೂನು ಅರಿವು, ಮಹಿಳಾ ದೌರ್ಜನ್ಯ ತಡೆ ಹಾಗೂ ಸಂತ್ರಸ್ತರಿಗೆ ನ್ಯಾಯ ಒದಗಿಸುವ ಕಾರ್ಯಗಳಲ್ಲಿ ನಿರಂತರವಾಗಿ ತೊಡಗಿಸಿಕೊಂಡಿದ್ದಾರೆ.

ರಾಜ್ಯದ ವಿವಿಧ ಜಿಲ್ಲೆಗಳಿಗೆ ಭೇಟಿ ನೀಡಿ, ಮಹಿಳೆಯರ ಅಹವಾಲುಗಳನ್ನು ಆಲಿಸುವುದು, ಸಮಸ್ಯೆಗಳನ್ನು ಸ್ಥಳದಲ್ಲಿಯೇ ಪರಿಶೀಲಿಸುವುದು ಹಾಗೂ ತೃಪ್ತಿತಸ್ಥರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ನಿರ್ದೇಶನ ನೀಡುವುದು ಅವರ ಕಾರ್ಯಶೈಲಿಯ ವಿಶೇಷತೆ. ಹೀಗಾಗಿ ಅನೇಕ ಮಹಿಳೆಯರಿಗೆ ಅವರು ಧೈರ್ಯದ ಪ್ರತೀಕವಾಗಿದ್ದಾರೆ.

ಶಾಲೆ-ಕಾಲೇಜುಗಳಲ್ಲಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸುವ ಅವರು, ಜೀವನದಲ್ಲಿ ಗುರಿಯ ಮಹತ್ವ, ಶಿಕ್ಷಣದ ಮೌಲ್ಯ, ಮಹಿಳೆಯರ ಆತ್ಮರಕ್ಷಣೆ, ಆತ್ಮವಿಶ್ವಾಸ ಹಾಗೂ ಕಾನೂನು ಅರಿವಿನ ಬಗ್ಗೆ ನೀಡುವ ಸಂದೇಶಗಳು ಯುವಜನತೆಗೆ ಹೊಸ ಚೈತನ್ಯ ತುಂಬುತ್ತವೆ. ಅವರ ಮಾತುಗಳಲ್ಲಿ ಒಬ್ಬ ಅಧಿಕಾರಿಯ ಕಠಿಣತೆಗಿಂತ, ಒಬ್ಬ ತಾಯಿಯ ಕಾಳಜಿ ಹೆಚ್ಚಾಗಿ ಕಾಣಿಸುತ್ತದೆ.

ಇಂದಿನ ಸಮಾಜದಲ್ಲಿ ಮತ್ತೊಬ್ಬರ ನೋವಿಗೆ ಸ್ಪಂದಿಸುವ ಮನಸ್ಸುಳ್ಳ ವ್ಯಕ್ತಿಗಳು ವಿರಳವಾಗುತ್ತಿರುವ ಸಂದರ್ಭದಲ್ಲಿ, ಅನಾಥರು, ಬಡವರು ಹಾಗೂ ಸಂಕಷ್ಟದಲ್ಲಿರುವ ಮಹಿಳೆಯರಿಗೆ ಆಸರೆಯಾಗುತ್ತಿರುವ ಡಾ. ನಾಗಲಕ್ಷ್ಮಿ ಚೌಧರಿ ಅವರಂತಹ ವ್ಯಕ್ತಿತ್ವಗಳು ಸಮಾಜಕ್ಕೆ ಅತ್ಯಗತ್ಯ. ರಾಜಕೀಯ ಮತ್ತು ಆಡಳಿತ ವ್ಯವಸ್ಥೆಯಲ್ಲಿ ಇಂತಹ ಸೇವಾ ಮನೋಭಾವದ ನಾಯಕತ್ವ ಹೆಚ್ಚಾದರೆ ಸಮಾಜ ಇನ್ನಷ್ಟು ಸುಂದರವಾಗಲಿದೆ.

ಯುವಜನತೆ ಕೇವಲ ಯಶಸ್ಸಿನ ಹಿಂದೆ ಓಡುವುದಕ್ಕಿಂತ ಸಮಾಜದ ಬಗ್ಗೆ ಕಾಳಜಿ ಹೊಂದಿದ ವ್ಯಕ್ತಿತ್ವವನ್ನು ರೂಪಿಸಿಕೊಳ್ಳಬೇಕು ಎಂಬ ಸಂದೇಶವನ್ನು ಅವರ ಬದುಕು ಸಾರುತ್ತದೆ. ಸೇವೆ, ಪ್ರಾಮಾಣಿಕತೆ ಮತ್ತು ಮಾನವೀಯತೆಯ ಮೂಲಕವೂ ಯಶಸ್ಸು ಸಾಧಿಸಬಹುದು ಎಂಬುದನ್ನು ಅವರು ತಮ್ಮ ಬದುಕಿನ ಮೂಲಕ ತೋರಿಸಿಕೊಟ್ಟಿದ್ದಾರೆ.

ಡಾ. ನಾಗಲಕ್ಷ್ಮಿ ಚೌಧರಿ ಅವರು ಇನ್ನಷ್ಟು ಆರೋಗ್ಯದಿಂದ, ಉತ್ಸಾಹದಿಂದ ರಾಜ್ಯದ ಮಹಿಳೆಯರ ಹಾಗೂ ಸಮಾಜದ ಒಳಿತಿಗಾಗಿ ಕಾರ್ಯನಿರ್ವಹಿಸಲಿ. ಅವರ ಸೇವಾ ಪಯಣ ಇನ್ನಷ್ಟು ಯಶಸ್ವಿಯಾಗಲಿ. ಅವರ ಆದರ್ಶಗಳು ಯುವಜನತೆಗೆ ಸ್ಫೂರ್ತಿಯಾಗಿ, ಸಮಾಜದಲ್ಲಿ ಇನ್ನಷ್ಟು ಸೇವಾ ಮನೋಭಾವದ ವ್ಯಕ್ತಿತ್ವಗಳು ರೂಪುಗೊಳ್ಳಲಿ ಎಂಬುದು ನನ್ನ ಹಾರೈಕೆ.



**-ಮೇಘನಾ ಎಸ್. ಮುದ್ದಿ**
**ವಿದ್ಯಾರ್ಥಿನಿ,**
**ಶ್ರೀಮತಿ ಎಂ.ಬಿ. ಹುಯಿಲಗೋಳ ಬಿ.ಎಡ್. ಶಿಕ್ಷಣ ಮಹಾವಿದ್ಯಾಲಯ, ಗದಗ**

---

### ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಒಕ್ಕೂಟ ಪದಾಧಿಕಾರಿಗಳ ತರಬೇತಿ ಶಿಬಿರ

## ಗ್ರಾಮಾಭಿವೃದ್ಧಿಯಿಂದಲೇ ದೇಶದ ಪ್ರಗತಿ ಸಾಧ್ಯ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಗ್ರಾಮಗಳ ಅಭಿವೃದ್ಧಿಯೇ ದೇಶದ ಅಭಿವೃದ್ಧಿಗೆ ಭದ್ರ ಬುನಾದಿಯಾಗಿದ್ದು, ಮಹಾತ್ಮ ಗಾಂಧೀಜಿಯವರ ಗ್ರಾಮ ಸ್ವರಾಜ್ಯದ ಕನಸನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ಕಾರ್ಯನಿರ್ವಹಿಸುತ್ತಿದೆ ಎಂದು ಮೃತ್ಯುಂಜಯ ಧಡೇಸೂರಮಠ ಹೇಳಿದರು.

ಪಟ್ಟಣದ ಕಾಳಿಕಾ ದೇವಸ್ಥಾನದ ಸಭಾಭವನದಲ್ಲಿ ಗುರುವಾರ ನಡೆದ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ಒಕ್ಕೂಟ ಪದಾಧಿಕಾರಿಗಳ ತರಬೇತಿ ಶಿಬಿರದಲ್ಲಿ ಮಾತನಾಡಿದ ಅವರು, ಜನರ ಜೀವನಮಟ್ಟ ಸುಧಾರಿಸುವುದೇ ಸಂಸ್ಥೆಯ ಮುಖ್ಯ ಉದ್ದೇಶವಾಗಿದೆ. ಶಿಸ್ತು, ಪಾರದರ್ಶಕತೆ ಹಾಗೂ ಸೇವಾ ಮನೋಭಾವದಿಂದ ಸಂಸ್ಥೆ ಜನರ ವಿಶ್ವಾಸ ಗಳಿಸಿದೆ ಎಂದು ಹೇಳಿದರು.

ಒಕ್ಕೂಟದ ಪದಾಧಿಕಾರಿಗಳು ತಮ್ಮ ಜವಾಬ್ದಾರಿಯನ್ನು ಪ್ರಾಮಾಣಿಕವಾಗಿ ನಿರ್ವಹಿಸಬೇಕು. ಸದಸ್ಯರ ವಿಶ್ವಾಸ ಉಳಿಸಿಕೊಂಡು ಯಾವುದೇ ರೀತಿಯ ವಂಚನೆಗೆ ಅವಕಾಶ ನೀಡಬಾರದು ಎಂದು ಕರೆ ನೀಡಿದ ಅವರು, ಡಾ. ಡಿ. ವೀರೇಂದ್ರ ಹೆಗ್ಗಡೆ ಹಾಗೂ ಹೇಮಾವತಿ ಅಮ್ಮ ಅವರ ಸಮಾಜಮುಖಿ ಸೇವೆಯನ್ನು ಶ್ಲಾಘಿಸಿದರು.

ನಿವೃತ್ತ ಮುಖ್ಯ ಶಿಕ್ಷಕ ಅರುಣ ಕುಲಕರ್ಣಿ ಮಾತನಾಡಿ, ಸದಸ್ಯರೊಂದಿಗೆ ಮಾನವೀಯ ಸಂಬಂಧ ಬೆಳೆಸುವುದು ಒಕ್ಕೂಟದ ಬಲವಾಗಿದೆ. ಸಾಲ ಮರುಪಾವತಿಗೆ ಸದಸ್ಯರನ್ನು ಪ್ರೇರೇಪಿಸುವ ಮೂಲಕ ಆರ್ಥಿಕ ಶಿಸ್ತು ಕಾಪಾಡಬೇಕು ಎಂದು ಸಲಹೆ ನೀಡಿದರು.

ಶ್ರೀ ಕಾಳಿಕಾದೇವಿ ಟ್ರಸ್ಟ್ ಅಧ್ಯಕ್ಷ ನಾರಾಯಣ ವಡ್ಡಟ್ಟಿ ಮಾತನಾಡಿ, ಡಾ. ಡಿ. ವೀರೇಂದ್ರ ಹೆಗ್ಗಡೆಯವರ ದೂರದೃಷ್ಟಿಯಿಂದ ಸಾವಿರಾರು ಮಹಿಳೆಯರು ಆರ್ಥಿಕ ಸ್ವಾವಲಂಬನೆ ಸಾಧಿಸಿದ್ದಾರೆ. ಸಮಾಜಮುಖಿ ಯೋಜನೆಗಳಿಂದ ಗ್ರಾಮೀಣ ಬದುಕಿನಲ್ಲಿ ಮಹತ್ವದ ಬದಲಾವಣೆ ಕಂಡುಬಂದಿದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ರೇಣುಕಮ್ಮ ಕಡೆತೋಟದ ವೇದಿಕೆಯ ಮೇಲಿದ್ದರು. ತಾಲೂಕು ಸಂಯೋಜಕ ಮಹಾಬಳೇಶ್ವರ ಪಟಗಾರ ಪ್ರಾಸ್ತಾವಿಕವಾಗಿ ಮಾತನಾಡಿದರು. ನಾಗೇಂದ್ರಸ್ವಾಮಿ ಸ್ವಾಗತಿಸಿ ಕಾರ್ಯಕ್ರಮ ನಿರೂಪಿಸಿದರು. ವಲಯ ಮೇಲ್ವಿಚಾರಕಿ ಸುಮಾ ಹಿರೇಮಠ ವಂದಿಸಿದರು.

---

### ಡಾ. ಮಹಾಂತ ಶಿವಯೋಗಿಗಳ ಆದರ್ಶ ಅನುಸರಿಸಿ ಸದೃಢ ಸಮಾಜ ನಿರ್ಮಿಸಿ

## ವ್ಯಸನ ತೊರೆದು ಮೌಲ್ಯಯುತ ಬದುಕು ಕಟ್ಟಿಕೊಳ್ಳಿ



**ವಿಜಯಸಾಕ್ಷಿ ಸುದ್ದಿ, ಹುಲಕೋಟಿ**

ವ್ಯಸನಮುಕ್ತ ಜೀವನವೇ ನಿಜವಾದ ಸಾಧನೆಯಾಗಿದ್ದು, ಇಲಕಲ್ಲದ ಚಿತ್ತರಗಿ ವಿಜಯಮಹಾಂತೇಶ್ವರ ಸಂಸ್ಥಾನ ಮಠದ ಲಿಂಗೈಕ್ಯ ಡಾ. ಮಹಾಂತ ಶಿವಯೋಗಿ ಸ್ವಾಮೀಜಿಯವರು ಮಹಾಂತ ಜೋಳಿಗೆ' ಆಂದೋಲನದ ಮೂಲಕ ದುಶ್ಚಟಗಳಿಂದ ಹಾಳಾಗುತ್ತಿದ್ದ ಕುಟುಂಬಗಳನ್ನು ರಕ್ಷಿಸಿ ಸಮಾಜದಲ್ಲಿ ಕ್ರಾಂತಿಕಾರಿ ಜಾಗೃತಿ ಮೂಡಿಸಿದ ಮಹಾನ್ ಸಂತರು ಎಂದು ಸಾಂಸ್ಕೃತಿಕ ಘಟಕದ ಸಂಯೋಜಕ ರಮೇಶ ಹುಲಕುಂದ ಹೇಳಿದರು.

ಹುಲಕೋಟಿಯ ಶ್ರೀ ಕೆ.ಎಚ್. ಪಾಟೀಲ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಡಾ. ಮಹಾಂತ ಶಿವಯೋಗಿಗಳ ಜನ್ಮದಿನಾಚರಣೆ ಅಂಗವಾಗಿ ಆಯೋಜಿಸಿದ್ದ ವ್ಯಸನಮುಕ್ತ ದಿನಾಚರಣೆ ಹಾಗೂ ವ್ಯಸನಮುಕ್ತ ಪ್ರತಿಜ್ಞಾವಿಧಿ' ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿ ಅವರು ಮಾತನಾಡಿದರು.ಸ್ವಾಮೀಜಿಯವರು ಸಾರಿದ ವ್ಯಸನಮುಕ್ತ ಹಾಗೂ ನೈತಿಕ ಸಮಾಜ ನಿರ್ಮಾಣದ ಸಂದೇಶ ಇಂದಿಗೂ ಪ್ರಸ್ತುತವಾಗಿದ್ದು, ಪ್ರತಿಯೊಬ್ಬರೂ ಅವರ ಜೀವನ ಮೌಲ್ಯಗಳನ್ನು ಅಳವಡಿಸಿಕೊಂಡು ನೆಮ್ಮದಿಯ ಬದುಕಿನೊಂದಿಗೆ ಸದೃಢ ಸಮಾಜ ನಿರ್ಮಾಣಕ್ಕೆ ಕೈಜೋಡಿಸಬೇಕು ಎಂದು ಕರೆ ನೀಡಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕಾಲೇಜಿನ ಪ್ರಾಂಶುಪಾಲ ಡಾ. ಅಪ್ಪಣ್ಣ ಹಂಜೆ ಮಾತನಾಡಿ, ವಿದ್ಯಾರ್ಥಿಗಳು ಮಾದಕ ವಸ್ತುಗಳು, ಧೂಮಪಾನ, ಮದ್ಯಪಾನ ಹಾಗೂ ಮೊಬೈಲ್ ವ್ಯಸನದಿಂದ ದೂರವಿರಬೇಕು. ದುಶ್ಚಟಗಳು ಆರೋಗ್ಯ, ಶಿಕ್ಷಣ ಹಾಗೂ ಭವಿಷ್ಯವನ್ನು ಹಾಳುಮಾಡುತ್ತವೆ.

ಯುವಜನತೆ ವ್ಯಸನಮುಕ್ತ ಸಮಾಜ ನಿರ್ಮಾಣದ ಜವಾಬ್ದಾರಿಯನ್ನು ಹೊತ್ತು ಜಾಗೃತಿ ಮೂಡಿಸಬೇಕು ಎಂದು ಸಲಹೆ ನೀಡಿದರು. ಎನ್‌ಎಸ್‌ಎಸ್ ಘಟಕದ ಸಂಯೋಜಕ ವಿಜಯಕುಮಾರ ಎಸ್. ವಂದಿಸಿದರು.ಕಾರ್ಯಕ್ರಮದಲ್ಲಿ ಪ್ರಾಧ್ಯಾಪಕರು ಹಾಗೂ ವಿದ್ಯಾರ್ಥಿಗಳು ವ್ಯಸನಮುಕ್ತ ಪ್ರತಿಜ್ಞೆ ಸ್ವೀಕರಿಸಿದರು.

---

### ಚಿನ್ನ-ಬೆಳ್ಳಿಗಿಂತ ಸತ್ಕಾರ್ಯ, ಸದ್ಗುಣ ಮತ್ತು ಧರ್ಮಾಚರಣೆಯೇ ನಿಜವಾದ ಐಶ್ವರ್ಯ

## ಅನ್ನವೇ ಬದುಕಿನ ನಿಜವಾದ ಸಂಪತ್ತು



**ವಿಜಯಸಾಕ್ಷಿ ಸುದ್ದಿ, ರಾಣೆಬೆನ್ನೂರು**

ಚಿನ್ನ, ಬೆಳ್ಳಿ, ಹಣ-ಆಸ್ತಿಯಿಲ್ಲದೆ ಬದುಕಬಹುದು. ಆದರೆ ಅನ್ನವಿಲ್ಲದೆ ಬದುಕಲು ಸಾಧ್ಯವಿಲ್ಲ. ಈಶ್ವರ ಸೃಷ್ಟಿಯಲ್ಲಿರುವ ಪ್ರತಿಯೊಂದೂ ಅಮೂಲ್ಯ ಸಂಪತ್ತಾಗಿದ್ದು, ದೇಹ, ಮನಸ್ಸು, ಬುದ್ಧಿ ಮತ್ತು ಸದ್ಗುಣಗಳೇ ಮನುಷ್ಯನ ನಿಜವಾದ ಐಶ್ವರ್ಯ ಎಂದು ಬಾಳೆಹೊನ್ನೂರಿನ ಶ್ರೀ ರಂಭಾಪುರಿ ವೀರಸಿಂಹಾಸನ ಮಹಾಸಂಸ್ಥಾನ ಪೀಠದ ಡಾ. ವೀರಸೋಮೇಶ್ವರ ಜಗದ್ಗುರುಗಳು ಹೇಳಿದರು.ತಾಲೂಕಿನ ಕೊಡಿಯಾಲ ಹೊಸಪೇಟೆ ಬಾಳೆಹಳ್ಳಿ ವೀರಸಿಂಹಾಸನ ಮಂಗಲ ಮಂಟಪದಲ್ಲಿ ಬುಧವಾರ ನಡೆದ ಜನಜಾಗೃತಿ ಧರ್ಮ ಸಮಾರಂಭದಲ್ಲಿ ಆಶೀರ್ವಚನ ನೀಡಿದ ಅವರು, ಹಣ ಮತ್ತು ಆಭರಣಗಳಿಂದ ಬದುಕು ಶ್ರೀಮಂತವಾಗುವುದಿಲ್ಲ. ಸದ್ಗುಣ, ಸಚ್ಚಾರಿತ್ರ್ಯ ಹಾಗೂ ಮೌಲ್ಯಾಧಾರಿತ ಜೀವನವೇ ಮನುಷ್ಯನನ್ನು ಆದರ್ಶ ವ್ಯಕ್ತಿಯನ್ನಾಗಿ ರೂಪಿಸುತ್ತದೆ ಎಂದು ತಿಳಿಸಿದರು.

ಋಷಿ-ಮುನಿಗಳು ಮತ್ತು ಆಚಾರ್ಯರು ಭೌತಿಕ ಸಂಪತ್ತಿನ ಹಿಂದೆ ಓಡದೆ ಆಧ್ಯಾತ್ಮಿಕ ಬದುಕಿನ ಮೂಲಕ ಸಮಾಜಕ್ಕೆ ದಾರಿದೀಪರಾದರು. ಮನುಷ್ಯನ ಬಳಿ ಎಲ್ಲ ಸೌಲಭ್ಯಗಳಿದ್ದರೂ ಸತ್ಯ, ಶುದ್ಧ ಕಾಯಕ ಮತ್ತು ಸತ್ಕಾರ್ಯಗಳಿಲ್ಲದಿದ್ದರೆ ಬದುಕಿಗೆ ನೆಮ್ಮದಿ ಸಿಗುವುದಿಲ್ಲ ಎಂದು ಅವರು ಹೇಳಿದರು.

ಸಮಾರಂಭವನ್ನು ಉದ್ಘಾಟಿಸಿದ ಜಿಲ್ಲಾ ಪಂಚಾಯಿತಿ ಮಾಜಿ ಸದಸ್ಯ ಸಂತೋಷ ಪಾಟೀಲ ಮಾತನಾಡಿ, ಜೀವನದಲ್ಲಿ ಸುಖ, ಶಾಂತಿ ಮತ್ತು ಆತ್ಮಬಲವೇ ನಿಜವಾದ ಸಂಪತ್ತು. ನ್ಯಾಯ, ನೀತಿ ಹಾಗೂ ಧರ್ಮದ ಮಾರ್ಗದಲ್ಲಿ ನಡೆಯುವವರು ಎಂದಿಗೂ ತಲೆಬಾಗುವ ಪರಿಸ್ಥಿತಿ ಎದುರಿಸುವುದಿಲ್ಲ ಎಂದರು.

ಆವರಗೊಳ್ಳ ಪುರವರ್ಗ ಹಿರೇಮಠದ ಓಂಕಾರ ಶಿವಾಚಾರ್ಯ ಸ್ವಾಮೀಜಿ ಮಾತನಾಡಿ, ಅಜ್ಞಾನ ನಿವಾರಣೆಗೆ ಗುರುವಿನ ಮಾರ್ಗ ದರ್ಶನ ಅಗತ್ಯ. ವೀರಶೈವ ಧರ್ಮದಲ್ಲಿ ಗುರುವಿಗೆ ಅತ್ಯುನ್ನತ ಸ್ಥಾನವಿರುವುದು ಇದೇ ಕಾರಣಕ್ಕಾಗಿ ಎಂದು ಹೇಳಿದರು.

> ಚಿನ್ನ-ಬೆಳ್ಳಿಯಿಂದಲ್ಲ, ಸದ್ಗುಣ, ಸಚ್ಚಾರಿತ್ರ್ಯ ಮತ್ತು ಧರ್ಮಾಚರಣೆಯಿಂದಲೇ ಮನುಷ್ಯನ ಬದುಕು ಶ್ರೀಮಂತವಾಗುತ್ತದೆ.
>
> **- ಡಾ. ವೀರಸೋಮೇಶ್ವರ ಜಗದ್ಗುರುಗಳು,** ಶ್ರೀ ರಂಭಾಪುರಿ ಪೀಠ

ಸಮಾರಂಭದಲ್ಲಿ ಮಳಲಿ ಸಂಸ್ಥಾನ ಮಠದ ಡಾ. ನಾಗಭೂಷಣ ಶಿವಾಚಾರ್ಯರು, ಹಂಪಸಾಗರ ನವಿಲು ಹಿರೇಮಠದ ಶಿವಲಿಂಗ ರುದ್ರಮುನಿ ಶಿವಾಚಾರ್ಯರು, ಲಿಂಗದಹಳ್ಳಿ ಹಿರೇಮಠದ ವೀರಭದ್ರ ಶಿವಾಚಾರ್ಯರು, ಪುಣ್ಯಕೋಟಿ ಮಠದ ಜಗದೀಶ್ವರ ಸ್ವಾಮೀಜಿ ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಇದೇ ವೇಳೆ ವಿವಿಧ ಕ್ಷೇತ್ರಗಳ ಗಣ್ಯರನ್ನು ಶ್ರೀ ರಂಭಾಪುರಿ ಜಗದ್ಗುರುಗಳು ಗುರುರಕ್ಷೆ ನೀಡಿ ಆಶೀರ್ವದಿಸಿದರು. ಸಂಗೀತ, ಭರತನಾಟ್ಯ ಹಾಗೂ ಯೋಗ ಪ್ರದರ್ಶನ ಕಾರ್ಯಕ್ರಮಗಳು ಗಮನ ಸೆಳೆದವು.

---

## ತಾಯಿ ಎದೆಹಾಲೇ ಮಗುವಿನ ಮೊದಲ ರೋಗನಿರೋಧಕ ಶಕ್ತಿ



**ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಮಗುವಿನ ಆರೋಗ್ಯಕರ ಬೆಳವಣಿಗೆಗೆ ತಾಯಿ ಎದೆಹಾಲು ಅತ್ಯಂತ ಅವಶ್ಯಕವಾಗಿದ್ದು, ಜನನದ ಮೊದಲ ಒಂದು ಗಂಟೆಯೊಳಗೆ ಸ್ತನ್ಯಪಾನ ಆರಂಭಿಸಿ, ಕನಿಷ್ಠ ಆರು ತಿಂಗಳವರೆಗೆ ಕಡ್ಡಾಯವಾಗಿ ತಾಯಿ ಎದೆಹಾಲನ್ನೇ ನೀಡಬೇಕು ಎಂದು ಉಪಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಎಸ್.ಎಫ್. ಹನಕನಹಳ್ಳಿ ಹೇಳಿದರು.

ತಾಲೂಕಿನ ಶಿಗ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಬುಧವಾರ ವಿಶ್ವ ಸ್ತನ್ಯಪಾನ ಸಪ್ತಾಹ ಅಂಗವಾಗಿ ಆಯೋಜಿಸಿದ್ದ ಜಾಗೃತಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ತಾಯಿ ಎದೆಹಾಲಿನಷ್ಟು ಪೌಷ್ಟಿಕಾಂಶಯುಕ್ತ ಆಹಾರ ಮತ್ತೊಂದಿಲ್ಲ. ಇದು ಮಗುವಿನ ದೈಹಿಕ ಹಾಗೂ ಮಾನಸಿಕ ಬೆಳವಣಿಗೆಗೆ ಅಗತ್ಯವಾದ ಪೋಷಕಾಂಶಗಳನ್ನು ಒದಗಿಸುವುದರ ಜೊತೆಗೆ ತಾಯಿಮಗುವಿನ ಬಾಂಧವ್ಯವನ್ನು ಮತ್ತಷ್ಟು ಗಟ್ಟಿಗೊಳಿಸುತ್ತದೆ. ತಾಯಿ ಎದೆಹಾಲು ಪರಿಶುದ್ಧವಾಗಿದ್ದು, ಸುಲಭವಾಗಿ ಜೀರ್ಣವಾಗುವುದರಿಂದ ಅದನ್ನು ಅಮೃತಕ್ಕೆ ಸಮಾನವೆಂದು ಪರಿಗಣಿಸಲಾಗುತ್ತದೆ ಎಂದು ತಿಳಿಸಿದರು. ಆರೋಗ್ಯ ಶಿಕ್ಷಣಾಧಿಕಾರಿ ಜಿ.ಬಿ. ಬಣಗಾರ ಮಾತನಾಡಿ, ಜನನದ ಮೊದಲ ಗಂಟೆಯಲ್ಲಿಯೇ ಎದೆಹಾಲುಣಿಸುವುದರಿಂದ ಮಗುವಿನ ರೋಗನಿರೋಧಕ ಶಕ್ತಿ ಹೆಚ್ಚುತ್ತದೆ. ತಾಯಿಯ ಮೊದಲ ಹಾಲು ಶಿಶುವಿನ ಆರೋಗ್ಯಕರ ಬದುಕಿಗೆ ಭದ್ರ ಬುನಾದಿಯಾಗಿದ್ದು, ಶಿಶು ಹಾಗೂ ತಾಯಿ ಮರಣ ಪ್ರಮಾಣ ತಗ್ಗಿಸಲು ಸಹಕಾರಿಯಾಗಿದೆ. ಆದ್ದರಿಂದ ಪ್ರತಿಯೊಬ್ಬ ತಾಯಿಯೂ ಮಗುವಿಗೆ ಕನಿಷ್ಠ ಆರು ತಿಂಗಳವರೆಗೆ ಕೇವಲ ತಾಯಿ ಎದೆಹಾಲನ್ನೇ ನೀಡಬೇಕು ಎಂದು ಸಲಹೆ ನೀಡಿದರು.

ಕಾರ್ಯಕ್ರಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ಸಿಬ್ಬಂದಿ ಸುಧಾ ಪೃಷ್ಠಿ, ಅಂಗನವಾಡಿ ಕಾರ್ಯಕರ್ತೆ ಸೌಮ್ಯಾ ಕಲ್ಯಾಣಮಠ, ಆಶಾ ಕಾರ್ಯಕರ್ತೆ ಶಶಿಕಲಾ ಚಿಂದಿ, ಆರೋಗ್ಯ ಸಿಬ್ಬಂದಿ, ಗರ್ಭಿಣಿಯರು ಹಾಗೂ ಬಾಣಂತಿಯರು ಉಪಸ್ಥಿತರಿದ್ದರು.

---

## ಆ.10ರಂದು ವಿವಿಧ ಸಾಂಘಿಕ ಚಟುವಟಿಕೆಗಳ ಉದ್ಘಾಟನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಶ್ರೀ ಅನ್ನದಾನೇಶ್ವರ ಪದವಿ ಪೂರ್ವ ಕಾಲೇಜಿನಲ್ಲಿ ಪ್ರಸಕ್ತ ಶೈಕ್ಷಣಿಕ ಸಾಲಿನ ವಿವಿಧ ಸಾಂಘಿಕ ಚಟುವಟಿಕೆಗಳ ಉದ್ಘಾಟನೆ ಹಾಗೂ ಪ್ರಥಮ ಪಿಯುಸಿ ವಿದ್ಯಾರ್ಥಿಗಳ ಸ್ವಾಗತ ಸಮಾರಂಭ ಅಂತರಂಗ2026' ಕಾರ್ಯಕ್ರಮವನ್ನು ಆಗಸ್ಟ್ 10ರಂದು ಸೋಮವಾರ ಬೆಳಿಗ್ಗೆ 10.30ಕ್ಕೆ ಆಯೋಜಿಸಲಾಗಿದೆ.

ಸಂಸ್ಥೆಯ ಅಧ್ಯಕ್ಷ ಮ್ಯುಪ್ಪಿನ ಬಸವಲಿಂಗ ಸ್ವಾಮೀಜಿ ಸಾನ್ನಿಧ್ಯ ವಹಿಸಲಿದ್ದು, ರೋಣ ಶಾಸಕ ಜಿ.ಎಸ್. ಪಾಟೀಲ ಕಾರ್ಯಕ್ರಮ ಉದ್ಘಾಟಿಸಲಿದ್ದಾರೆ. ಕಾಲೇಜು ಚೇರ್ಮನ್ ಎಂ.ಜಿ. ಸೋಮನಕಟ್ಟಿ ಅಧ್ಯಕ್ಷತೆ ವಹಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ಹಂಪಿ ಕನ್ನಡ ವಿಶ್ವವಿದ್ಯಾಲಯದ ಕುಲಪತಿ ಪ್ರೊ. ಡಿ.ವಿ. ಪರಮಶಿವಮೂರ್ತಿ, ಪದವಿ ಪೂರ್ವ ಶಿಕ್ಷಣ ಇಲಾಖೆ ಉಪನಿರ್ದೇಶಕ ಸಿದ್ದಲಿಂಗ ಬಂಡು ಮಸನಾಯಕ, ಸಂಸ್ಥೆಯ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ, ಆಡಳಿತಾಧಿಕಾರಿ ಡಾ. ಜಿ.ಕೆ. ಕಾಳೆ, ಸದಸ್ಯರಾದ ಬಸವರಾಜ ಕಳಕೊಣ್ಣವರ, ಎಂ.ಪಿ. ಪಾಟೀಲ, ಮಲ್ಲಣ್ಣ ಶಿರ್ಶಿ ಸೇರಿದಂತೆ ಹಲವಾರು ಗಣ್ಯರು ಭಾಗವಹಿಸಲಿದ್ದಾರೆ ಎಂದು ಕಾಲೇಜಿನ ಪ್ರಾಚಾರ್ಯ ವೈ.ಸಿ. ಪಾಟೀಲ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಕ್ಷಿಪ್ತ ಸುದ್ದಿಗಳು

# 12 ಗ್ರಾಮಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಕಾಲೇಜು ಮಂಜೂರಿಗೆ ಮನವಿ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ತಾಲೂಕಿನ ಹಂಪಾಪಟ್ಟಣ ಗ್ರಾಮಕ್ಕೆ ಸರ್ಕಾರಿ ಪದವಿಪೂರ್ವ ಕಾಲೇಜು ಮಂಜೂರು ಮಾಡುವಂತೆ ಆಗ್ರಹಿಸಿ ಹಂಪಾಪಟ್ಟಣ ಪದವಿಪೂರ್ವ ಕಾಲೇಜು ಹೋರಾಟ ಸಮಿತಿ ಸದಸ್ಯರು ಕ್ಷೇತ್ರದ ಶಾಸಕ ಕೆ. ನೇಮಿರಾಜನಾಯ್ಕ ಅವರಿಗೆ ಮನವಿ ಸಲ್ಲಿಸಿದರು.


ಈ ಸಂದರ್ಭದಲ್ಲಿ ಹೋರಾಟ ಸಮಿತಿ ಸಂಚಾಲಕ ಬುಡ್ಡಿ ಬಸವರಾಜ್ ಮಾತನಾಡಿ, ಹಂಪಾಪಟ್ಟಣ ಗ್ರಾಮವು ಸುತ್ತಮುತ್ತಲಿನ 12ಕ್ಕೂ ಹೆಚ್ಚು ಗ್ರಾಮಗಳಿಗೆ ಕೇಂದ್ರ ಸ್ಥಾನವಾಗಿದ್ದು, ಈ ಭಾಗದ ವಿದ್ಯಾರ್ಥಿಗಳು ಪದವಿಪೂರ್ವ ಶಿಕ್ಷಣಕ್ಕಾಗಿ ದೂರದ ಪಟ್ಟಣಗಳಿಗೆ ತೆರಳಬೇಕಾದ ಅನಿವಾರ್ಯತೆ ಎದುರಿಸುತ್ತಿದ್ದಾರೆ. ರೈತರು, ಕೃಷಿ ಕೂಲಿ ಕಾರ್ಮಿಕರು ಹಾಗೂ ಆರ್ಥಿಕವಾಗಿ ಹಿಂದುಳಿದ ಕುಟುಂಬಗಳ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಹಂಪಾಪಟ್ಟಣದಲ್ಲಿ ಸರ್ಕಾರಿ ಪದವಿಪೂರ್ವ ಕಾಲೇಜು ಆರಂಭಿಸುವುದು ಅಗತ್ಯವಾಗಿದೆ ಎಂದು ಒತ್ತಾಯಿಸಿದರು.

ಆಗಸ್ಟ್ 13ರಿಂದ ಆರಂಭವಾಗಲಿರುವ ವಿಧಾನಸಭಾ ಅಧಿವೇಶನದಲ್ಲಿ ಹಂಪಾಪಟ್ಟಣಕ್ಕೆ ಸರ್ಕಾರಿ ಪದವಿಪೂರ್ವ ಕಾಲೇಜು ಮಂಜೂರು ಮಾಡುವ ಕುರಿತು ಪ್ರಸ್ತಾವನೆ ಮಂಡಿಸಿ, ಸರ್ಕಾರದಿಂದ ಶೀಘ್ರ ಅನುಮೋದನೆ ದೊರಕುವಂತೆ ಕ್ರಮ ಕೈಗೊಳ್ಳಬೇಕು ಎಂದು ಮನವಿ ಮಾಡಿದರು.

ಮನವಿ ಸ್ವೀಕರಿಸಿದ ಶಾಸಕ ಕೆ. ನೇಮಿರಾಜನಾಯ್ಕ ಅವರು, ಹಂಪಾಪಟ್ಟಣದ ವಿದ್ಯಾರ್ಥಿಗಳ ಬೇಡಿಕೆ ನ್ಯಾಯಸಮ್ಮತವಾಗಿದ್ದು, ಸರ್ಕಾರದ ಗಮನಕ್ಕೆ ವಿಷಯವನ್ನು ತಂದು ವಿಧಾನಸಭಾ ಅಧಿವೇಶನದಲ್ಲಿ ಪ್ರಸ್ತಾಪಿಸಿ ಕಾಲೇಜು ಮಂಜೂರು ಮಾಡಿಸಲು ಅಗತ್ಯ ಪ್ರಯತ್ನ ಮಾಡುವುದಾಗಿ ಭರವಸೆ ನೀಡಿದರು.

ಈ ಸಂದರ್ಭದಲ್ಲಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಗೀತಾ ಪತ್ರಿ ಎಲ್ಲಪ್ಪ, ಉಪಾಧ್ಯಕ್ಷ ಟಿ. ಮಂಜುನಾಥ, ಗ್ರಾಮ ಪಂಚಾಯಿತಿ ಸದಸ್ಯರು, ವಿಎಸ್ಎಸ್ಎನ್ ಅಧ್ಯಕ್ಷ ಕೆ. ಹುಲುಗಪ್ಪ, ವಿವಿಧ ಮುಖಂಡರು, ಗ್ರಾಮಸ್ಥರು, ಶಿಕ್ಷಣ ಪ್ರೇಮಿಗಳು ಹಾಗೂ ಪದವಿಪೂರ್ವ ಕಾಲೇಜು ಹೋರಾಟ ಸಮಿತಿಯ ಸದಸ್ಯರು ಉಪಸ್ಥಿತರಿದ್ದರು.

# ಮಧ್ಯರಾತ್ರಿ ಟೆಕ್ಕಿಯ ಹುಚ್ಚಾಟ! 45 ನಿಮಿಷ ಏರ್‌ಗನ್ ಫೈರಿಂಗ್: ಕಾರುಗಳ ಗಾಜು ಪುಡಿ ಪುಡಿ



**ವಿಜಯಸಾಕ್ಷಿ ಸುದ್ದಿ, ಆನೇಕಲ್**

ಕುಡಿದ ಅಮಲಿನಲ್ಲಿ ಟೆಕ್ಕಿಯೊಬ್ಬ ಅಪಾರ್ಟ್‌ಮೆಂಟ್‌ನ ಬಾಲ್ಕನಿಯಿಂದ ಏರ್‌ಗನ್‌ನಿಂದ ಅಡ್ಡಾದಿಡ್ಡಿ ಫೈರಿಂಗ್ ನಡೆಸಿ ನಿವಾಸಿಗಳನ್ನು ಬೆಚ್ಚಿಬೀಳಿಸಿದ ಘಟನೆ ಬೆಂಗಳೂರಿನ ಹೊರವಲಯದ ಆನೇಕಲ್ ತಾಲೂಕಿನ ಬಂಡಾಪುರ ಸಮೀಪದ ಸಿಪಾನಿ ಅಪಾರ್ಟ್‌ಮೆಂಟ್‌ನಲ್ಲಿ ನಡೆದಿದೆ.

ಕಾರುಗಳು, ಪಾರ್ಕಿಂಗ್ ಪ್ರದೇಶ ಹಾಗೂ ಸೆಕ್ಯುರಿಟಿ ಸಿಬ್ಬಂದಿಯನ್ನು ಗುರಿಯಾಗಿಸಿಕೊಂಡು ಸುಮಾರು 45 ನಿಮಿಷಗಳ ಕಾಲ ನಡೆಸಿದ ಫೈರಿಂಗ್‌ನಿಂದ ಭಾರೀ ಆತಂಕ ಉಂಟಾಯಿತು. ಆರೋಪಿ ಅನುರಾಗ್ ತಿವಾರಿಯನ್ನು ಸೂರ್ಯನಗರ ಪೊಲೀಸರು ಬಂಧಿಸಿದ್ದಾರೆ.

ಉತ್ತರ ಪ್ರದೇಶದ ಲಕ್ನೋ ಮೂಲದ 40 ವರ್ಷದ ಅನುರಾಗ್ ತಿವಾರಿ ವೈಟ್‌ಫೀಲ್ಡ್‌ನ ಖಾಸಗಿ ಐಟಿ ಕಂಪನಿಯಲ್ಲಿ ಉದ್ಯೋಗಿಯಾಗಿದ್ದು, ಕಳೆದ ಎಂಟು ತಿಂಗಳಿಂದ ಅಪಾರ್ಟ್‌ಮೆಂಟ್‌ನ ಆ304 ಫ್ಲಾಟ್‌ನಲ್ಲಿ ವಾಸವಾಗಿದ್ದರು. ಘಟನೆ ನಡೆದ ರಾತ್ರಿ ಕಂಠಪೂರ್ತಿ ಮದ್ಯ ಸೇವಿಸಿದ್ದ ಆತ ಮೊದಲು ಫ್ಲಾಟ್‌ನೊಳಗೆ ಜೋರಾಗಿ ಗಲಾಟೆ ನಡೆಸಿದ್ದಾನೆ.

ನಂತರ ಮಧ್ಯರಾತ್ರಿ ಸುಮಾರು 2.30ರ ವೇಳೆಗೆ ಬಾಲ್ಕನಿಗೆ ಬಂದು ಕೆಳಗಿದ್ದ ಕಾರುಗಳು ಹಾಗೂ ಪಾರ್ಕಿಂಗ್ ಶೆಡ್ ಮೇಲೆ ಏರ್‌ಗನ್‌ನಿಂದ ಗುಂಡು ಹಾರಿಸಲು ಆರಂಭಿಸಿದ್ದಾನೆ. ಫೈರಿಂಗ್ ಶಬ್ದ ಕೇಳಿ ಸ್ಥಳಕ್ಕೆ ಧಾವಿಸಿದ ಸೆಕ್ಯುರಿಟಿ ಗಾರ್ಡ್‌ಗಳ ಮೇಲೆಯೂ ಶೂಟ್ ಮಾಡಿದ್ದಾನೆ.

ಈ ಘಟನೆ ಸುಮಾರು 45 ನಿಮಿಷಗಳ ಕಾಲ ಮುಂದುವರಿದಿದ್ದು, ಅಪಾರ್ಟ್‌ಮೆಂಟ್ ನಿವಾಸಿಗಳು ಭಯಭೀತರಾಗಿದ್ದರು.

ಫೈರಿಂಗ್‌ನಲ್ಲಿ ಹಲವು ಕಾರುಗಳ ಗಾಜುಗಳು ಜಖಂಗೊಂಡಿವೆ. ಕಾರು ಮಾಲೀಕ ಬಿದ್ಯುತ್ ನೀಡಿದ ದೂರಿನ ಮೇರೆಗೆ ಸೂರ್ಯನಗರ ಠಾಣೆ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಸ್ಥಳಕ್ಕೆ ಭೇಟಿ ನೀಡಿದ ಸೋಕೋ ತಂಡ ಏರ್‌ಗನ್ ಬಾಲ್ಸ್ ಸೇರಿದಂತೆ ಪ್ರಮುಖ ಸಾಕ್ಷ್ಯಗಳನ್ನು ವಶಪಡಿಸಿಕೊಂಡಿದ್ದು, ಕೃತ್ಯಕ್ಕೆ ಬಳಸಿದ ಏರ್‌ಗನ್‌ನ್ನೂ ಜಪ್ತಿ ಮಾಡಿದೆ. ಪ್ರಾಥಮಿಕ ತನಿಖೆಯಲ್ಲಿ ಆರೋಪಿಯು ಮದ್ಯದ ಅಮಲಿನಲ್ಲಿ ಈ ಕೃತ್ಯ ಎಸಗಿರುವುದು ಬೆಳಕಿಗೆ ಬಂದಿದ್ದು, ಪೊಲೀಸರು ವಿವಿಧ ಆಯಾಮಗಳಲ್ಲಿ ತನಿಖೆ ಮುಂದುವರಿಸಿದ್ದಾರೆ.

# ಸಣ್ಣ ಕೈಗಾರಿಕೆಗಳಿಗೆ ಶೇ.6 ಬಡ್ಡಿ ಮರುಪಾವತಿ ಸೌಲಭ್ಯ

**ವಿಜಯಸಾಕ್ಷಿ ಸುದ್ದಿ, ಗದಗ**

ಕಾರ್ಯಕ್ರಮದಡಿ ಬ್ಯಾಂಕ್ ಹಾಗೂ ಹಣಕಾಸು ಸಂಸ್ಥೆಗಳಿಂದ ಅವಧಿ ಸಾಲ ಪಡೆದು ಸ್ಥಾಪನೆಯಾಗಿರುವ ಅತೀಸಣ್ಣ ಮತ್ತು ಸಣ್ಣ ಉತ್ಪಾದನಾ ಕೈಗಾರಿಕಾ ಘಟಕಗಳಿಗೆ ಶೇ.6ರಷ್ಟು ಬಡ್ಡಿ ಮರುಪಾವತಿ ಬೆಂಬಲ ಯೋಜನೆ ಜಾರಿಗೊಳಿಸಲಾಗಿದೆ. ಏಪ್ರಿಲ್ 1ರಿಂದ ನಿಗದಿತ ವಾಣಿಜ್ಯ ಬ್ಯಾಂಕ್‌ಗಳು ಹಾಗೂ ಪ್ರಾದೇಶಿಕ ಗ್ರಾಮೀಣ ಬ್ಯಾಂಕ್‌ಗಳಿಂದ ಅವಧಿ ಸಾಲ ಪಡೆದಿರುವ ಜಿಲ್ಲೆಯ ಅತೀಸಣ್ಣ ಹಾಗೂ ಸಣ್ಣ ಉತ್ಪಾದನಾ ಕೈಗಾರಿಕೆಗಳು ಆಗಸ್ಟ್ 10ರೊಳಗೆ ಜಿಲ್ಲಾ ಕೈಗಾರಿಕಾ ಕೇಂದ್ರ, ಗದಗ ಕಚೇರಿಗೆ ಅರ್ಜಿ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಕೈಗಾರಿಕಾ ಕೇಂದ್ರ, 2ನೇ ಮಹಡಿ, ಕೊಠಡಿ ಸಂಖ್ಯೆ 221, ಜಿಲ್ಲಾ ಆಡಳಿತ ಭವನ, ಹುಬ್ಬಳ್ಳಿ ರಸ್ತೆ, ಗದಗ ಕಚೇರಿಯನ್ನು ಅಥವಾ ದೂರವಾಣಿ ಸಂಖ್ಯೆ 08372-200122 / 8123342965 ಸಂಪರ್ಕಿಸಬಹುದು ಎಂದು ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಅಡವೀಂದ್ರಸ್ವಾಮಿಮಠದ 350ನೇ ಶಿವಾನುಭವದಲ್ಲಿ ಪತ್ರಿಕೆಗಳು ರಾಷ್ಟ್ರಭಕ್ತಿ ಜಾಗೃತಿಯ ಪ್ರಬಲ ಅಸ್ತ್ರ ಎಂದ ಸಾಹಿತಿ

# ಸ್ವಾತಂತ್ರ್ಯ ಹೋರಾಟದಲ್ಲಿ ಜಿಲ್ಲೆಯ ಪತ್ರಿಕೆಗಳ ಪಾತ್ರ ಅವಿಸ್ಮರಣೀಯ




**ವಿಜಯಸಾಕ್ಷಿ ಸುದ್ದಿ, ಗದಗ**

ಭಾರತದ ಸ್ವಾತಂತ್ರ್ಯ ಹೋರಾಟದಲ್ಲಿ ಕನ್ನಡ ಪತ್ರಿಕೆಗಳು ಜನರಲ್ಲಿ ರಾಷ್ಟ್ರಭಕ್ತಿ ಜಾಗೃತಿಗೊಳಿಸುವುದರ ಜೊತೆಗೆ ಬ್ರಿಟಿಷರ ದಬ್ಬಾಳಿಕೆ ವಿರುದ್ಧ ಧ್ವನಿ ಎತ್ತಿದ ಪ್ರಬಲ ಅಸ್ತ್ರಗಳಾಗಿದ್ದವು. ವಿಶೇಷವಾಗಿ ಗದಗ ಜಿಲ್ಲೆಯ ಪತ್ರಿಕೆಗಳು ಸ್ವಾತಂತ್ರ್ಯ ಚಳುವಳಿಗೆ ಮಹತ್ವದ ಕೊಡುಗೆ ನೀಡಿದ್ದು, ಅವುಗಳ ಪಾತ್ರ ಇತಿಹಾಸದಲ್ಲಿ ಅವಿಸ್ಮರಣೀಯವಾಗಿದೆ ಎಂದು ಜಿಲ್ಲಾ ಮಕ್ಕಳ ಸಾಹಿತ್ಯ ಪರಿಷತ್ ಅಧ್ಯಕ್ಷರು, ಸಾಹಿತಿ ಹಾಗೂ ಸಂಶೋಧಕ ಡಾ. ರಾಜೇಂದ್ರ ಎಸ್. ಗಡಾದ ಹೇಳಿದರು.

ನಗರದ ಮುಳುಗುಂದ ನಾಕಾ ಬಳಿಯ ಶ್ರೀ ಅಡವೀಂದ್ರಸ್ವಾಮಿ ಮಠದಲ್ಲಿ ನಡೆದ 350ನೇ ಮಾಸಿಕ ಶಿವಾನುಭವ ಹಾಗೂ ಖ್ಯಾತ ಗಾಯಕಿ ಎಸ್. ಜಾನಕಿ ಅವರಿಗೆ ಸ್ವರ ಶ್ರದ್ಧಾಂಜಲಿ ಕಾರ್ಯಕ್ರಮದಲ್ಲಿ ಸ್ವಾತಂತ್ರ್ಯ ಸಂಗ್ರಾಮದಲ್ಲಿ ಗದಗ ಜಿಲ್ಲೆಯ ಪತ್ರಿಕೆಗಳ ಪಾತ್ರ ವಿಷಯದ ಕುರಿತು ಉಪನ್ಯಾಸ ನೀಡಿದ ಅವರು, ಕರ್ನಾಟಕ ಬಂಧು, ಕಲ್ಕಿ, ವಿಶ್ವಬಂಧು, ದೇಶಬಂಧು ಸೇರಿದಂತೆ ಜಿಲ್ಲೆಯ ಹಲವು ಪತ್ರಿಕೆಗಳು ಸ್ವಾತಂತ್ರ್ಯ ಚಳುವಳಿಯ ಸಂದೇಶವನ್ನು ಜನರಿಗೆ ತಲುಪಿಸಿ ರಾಷ್ಟ್ರಸೇವೆಯಲ್ಲಿ ಮಹತ್ವದ ಪಾತ್ರ ವಹಿಸಿದ್ದವು ಎಂದು ಹೇಳಿದರು.

ಈ ಪತ್ರಿಕೆಗಳ ಪ್ರೇರಣೆಯಿಂದ ಪ.ಲೋ. ಬಂಕಾಪುರ, ಎಂ. ಜೀವನ್, ಕೆ.ಎಲ್. ಅಣ್ಣಿಗೇರಿ, ಹೆಚ್.ಎಸ್. ಹೊಂಬಾಳಿ, ರಾಮಾಚಾರ್ಯ ಗಲಗಲಿ, ಪಂಡರಿನಾಥಾಚಾರ್ಯ ಗಲಗಲಿ, ಕೆ.ಎನ್. ಶಾಂತಗಿರಿ, ಡಾ. ಎನ್.ಹೆಚ್. ಗೋಡಬೋಲೆ, ಹ.ರಾ. ಕಿದಿಯೂರ, ವೇದಮೂರ್ತಿ ಇಟಗಿ, ಜಯರಾಮಾಚಾರ್ಯ ಮಳಗಿ ಸೇರಿದಂತೆ ಅನೇಕ ಪತ್ರಕರ್ತರು ಗದಗ ಜಿಲ್ಲೆಯ ಪತ್ರಿಕೋದ್ಯಮವನ್ನು ಶ್ರೀಮಂತಗೊಳಿಸಿದರು ಎಂದು ತಿಳಿಸಿದರು.

ಕಾರ್ಯಕ್ರಮದಲ್ಲಿ ಇತ್ತೀಚೆಗೆ ನಿಧನರಾದ ಖ್ಯಾತ ಗಾಯಕಿ ಎಸ್. ಜಾನಕಿ ಅವರಿಗೆ ಸ್ವರ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಯುವಗಾಯಕಿ ಅಶ್ವಿನಿ ಸೋಮನಗೌಡರ ಅವರು ಎಸ್. ಜಾನಕಿ ಹಾಡಿದ ಗೀತೆಗಳನ್ನು ಪ್ರಸ್ತುತಪಡಿಸಿದರು. ನಾರಿ ಸಮ್ಮಾನ್ ಪ್ರಶಸ್ತಿ ಪುರಸ್ಕೃತೆ ಸುವರ್ಣ ಸದಾಶಿವಯ್ಯ ಮದರಿಮಠ ಅವರನ್ನು ಸನ್ಮಾನಿಸಲಾಯಿತು. ಕಾಶಿಯಾತ್ರೆ ಪೂರೈಸಿದ ಭಕ್ತ ದಂಪತಿಗಳಿಗೆ ಗುರುರಕ್ಷೆ ನೀಡಿ ಗೌರವಿಸಲಾಯಿತು.

**ಸ್ವಾತಂತ್ರ್ಯ ಹೋರಾಟದ ಕಿಚ್ಚನ್ನು ಜನಮನಗಳಿಗೆ ತಲುಪಿಸಿದ ಗದಗ ಜಿಲ್ಲೆಯ ಪತ್ರಿಕೆಗಳು ರಾಷ್ಟ್ರಜಾಗೃತಿಯ ಪ್ರಬಲ ಅಸ್ತ್ರಗಳಾಗಿದ್ದವು.**
**– ಡಾ. ರಾಜೇಂದ್ರ ಎಸ್. ಗಡಾದ**

ಸಾನ್ನಿಧ್ಯ ವಹಿಸಿದ್ದ ಅಡವೀಂದ್ರಸ್ವಾಮಿ ಮಠದ ಧರ್ಮದರ್ಶಿ ಶ್ರೀ ಮಹೇಶ್ವರ ಸ್ವಾಮಿಗಳು, ಸ್ವಾತಂತ್ರ್ಯ ಚಳುವಳಿಯಲ್ಲಿ ಗದಗ ಜಿಲ್ಲೆಯ ಪತ್ರಿಕೆಗಳು ಹಾಗೂ ಮಠಗಳ ಕೊಡುಗೆ ಅಪೂರ್ವವಾಗಿದೆ ಎಂದು ಹೇಳಿದರು.

# ಮಂಕಾಳ ವೈದ್ಯರಿಗೆ ಸಚಿವ ಸ್ಥಾನ ತಪ್ಪಿಸಿದ್ದು ಸಮಾಜಕ್ಕೆ ಅನ್ಯಾಯ



**ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಸಚಿವ ಸಂಪುಟದಲ್ಲಿ ಗಂಗಾಮತ, ಬೆಸ್ತ, ಕೋಲಿ, ಕಬ್ಬಲಿಗ, ಅಂಬಿಗ, ಮೊಗವೀರ ಸೇರಿದಂತೆ 39ಕ್ಕೂ ಹೆಚ್ಚು ಉಪಸಮುದಾಯಗಳ ಏಕೈಕ ಶಾಸಕ ಮಂಕಾಳ ವೈದ್ಯ ಅವರಿಗೆ ಸಚಿವ ಸ್ಥಾನ ಕೈತಪ್ಪಿರುವುದು ಸಮಾಜಕ್ಕೆ ಮಾಡಿರುವ ಅನ್ಯಾಯ ಹಾಗೂ ಅಗೌರವವಾಗಿದೆ ಎಂದು ಮಾಜಿ ಕೆಪಿಸಿಸಿ ಹಿಂದುಳಿದ ವರ್ಗಗಳ ವಿಭಾಗದ ರಾಜ್ಯ ಉಪಾಧ್ಯಕ್ಷ ಹಾಗೂ ವಿಜಯನಗರ ಜಿಲ್ಲಾ ಗಂಗಾಮತ-ಬೆಸ್ತ ಸಮಾಜದ ಮಾಜಿ ಅಧ್ಯಕ್ಷ ಅಂಬಾಡಿ ನಾಗರಾಜ್ ಆಕ್ರೋಶ ವ್ಯಕ್ತಪಡಿಸಿದರು.

ಪಟ್ಟಣದ ಗಂಗಾಮತ-ಬೆಸ್ತ ಸಮಾಜ ಭವನದಲ್ಲಿ ಬುಧವಾರ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಹೈಕಮಾಂಡ್‌ನ ಆರಂಭಿಕ ಪಟ್ಟಿಯಲ್ಲಿ ಮಂಕಾಳ ವೈದ್ಯ ಅವರ ಹೆಸರು ಇದ್ದರೂ, ಕೊನೆಯ ಕ್ಷಣದಲ್ಲಿ ಕೈಬಿಡಲಾಗಿದೆ ಎಂದು ಆರೋಪಿಸಿದರು.

ಹಿಂದಿನ ಸಿದ್ದರಾಮಯ್ಯ ನೇತೃತ್ವದ ಸರ್ಕಾರದಲ್ಲಿ ಮಂಕಾಳ ವೈದ್ಯ ಅವರು ಸಚಿವರಾಗಿ ಕಾರ್ಯನಿರ್ವಹಿಸಿದ್ದರು. ಈ ಬಾರಿಯೂ ಅವರಿಗೆ ಅವಕಾಶ ಸಿಗುವ ವಿಶ್ವಾಸ ಸಮಾಜಕ್ಕಿತ್ತು. ಆದರೆ ಸಚಿವ ಸಂಪುಟದಲ್ಲಿ ನಮ್ಮ ಸಮಾಜಕ್ಕೆ ಯಾವುದೇ ಪ್ರಾತಿನಿಧ್ಯ ಸಿಗದಿರುವುದು ತೀವ್ರ ನಿರಾಸೆ ಉಂಟುಮಾಡಿದೆ ಎಂದು ಹೇಳಿದರು.

ರಾಜ್ಯದ ನಾಯಕತ್ವ ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ, ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಹಾಗೂ ಮಾಜಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಮಧ್ಯಪ್ರವೇಶಿಸಿ ಮಂಕಾಳ ವೈದ್ಯ ಅಥವಾ ವಿಧಾನ ಪರಿಷತ್ ಸದಸ್ಯ ತಿಪ್ಪಣ್ಣ ಕಮಕನೂರ ಅವರಲ್ಲಿ ಒಬ್ಬರಿಗಾದರೂ ಸಚಿವ ಸ್ಥಾನ ನೀಡುವ ಮೂಲಕ ಸಮಾಜಕ್ಕೆ ನ್ಯಾಯ ಒದಗಿಸಬೇಕು ಎಂದು ಆಗ್ರಹಿಸಿದರು.

ಸುದ್ದಿಗೋಷ್ಠಿಯಲ್ಲಿ ತಾಲೂಕು ಗಂಗಾಮತ-ಬೆಸ್ತ ಸಮಾಜದ ನಿಕಟಪೂರ್ವ ಅಧ್ಯಕ್ಷ ಅಂಬಾಡಿ ಮಹೇಶ್, ಮಾಜಿ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸರ್ದಾರ್ ಯಮನೂರಪ್ಪ, ವೈ. ಯಮುನೇಶ್, ಗೋಣಿಬಸಪ್ಪ, ಸುರೇಶ್, ಯರಿಸ್ವಾಮಿ, ಪ್ರಕಾಶ್, ನಾಗಲಿಂಗಪ್ಪ, ಬಿ. ಸೂರ್ಯನಾರಾಯಣ, ಸರ್ದಾರ್ ಜೀವಪ್ಪ, ಸರ್ದಾರ್ ಸಿದ್ದಪ್ಪ, ಪರಶುರಾಮ ಬಾರಿಕರ, ವೆಂಕಟೇಶ್ ವಲ್ಲಭಾಪುರ, ವಿರೂಪಾಕ್ಷಿ ಮೊರಗೇರಿ, ಅಂಬಿಗರ ಮಂಜುನಾಥ್ ಸೇರಿದಂತೆ ಸಮಾಜದ ಮುಖಂಡರು ಹಾಗೂ ಸದಸ್ಯರು ಉಪಸ್ಥಿತರಿದ್ದರು.

# ಕಾಂಗ್ರೆಸ್ ಯುವಜನರ ರಕ್ತ ಹೀರಿ ಬದುಕುತ್ತಿದೆ



**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಕಾಂಗ್ರೆಸ್ ಪಕ್ಷವು ಯುವಜನರ ರಕ್ತ ಹೀರಿ ಬದುಕುತ್ತಿದೆ ಎಂದು ವಿಧಾನ ಪರಿಷತ್ ವಿಪಕ್ಷ ನಾಯಕ ಛಲವಾದಿ ನಾರಾಯಣಸ್ವಾಮಿ ರಾಜ್ಯ ಸರ್ಕಾರದ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಯುವ ಕಾಂಗ್ರೆಸ್ ಕಾರ್ಯಕರ್ತರು ಮಾಜಿ ಡಿಸಿಎಂ ಸಿ.ಎನ್. ಅಶ್ವತ್ಥ್ ನಾರಾಯಣ ಅವರ ಕಚೇರಿಗೆ ಪೋಸ್ಟರ್ ಅಂಟಿಸಿದ ಪ್ರಕರಣವನ್ನು ಖಂಡಿಸಿರುವ ಅವರು, ಇದು ಕಾಂಗ್ರೆಸ್‌ನ ಸಂಸ್ಕೃತಿ ಎಂದು ಆರೋಪಿಸಿದ್ದಾರೆ.

ಬೆಂಗಳೂರಿನಲ್ಲಿ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಛಲವಾದಿ ನಾರಾಯಣಸ್ವಾಮಿ, ಕಾಂಗ್ರೆಸ್ ಯಾವಾಗಲೂ ಪೋಸ್ಟರ್ ಚಳವಳಿಯ ಮೂಲಕ ರಾಜಕೀಯ ಮಾಡುತ್ತಿದೆ. ಆದರೆ, ಜೆನ್ ಜೀ (ಎಲ್ಲಿಫ) ಯುವ ಸಮೂಹ ದೇಶದ ಭವಿಷ್ಯವಾಗಿದ್ದು, ಯುವಕರ ಪರವಾಗಿ ಬಿಜೆಪಿ ಸದಾ ನಿಲ್ಲಲಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿನ ಪರೀಕ್ಷಾ ಅಕ್ರಮಗಳ ಕುರಿತು ಸರ್ಕಾರವನ್ನು ಪ್ರಶ್ನಿಸಿದ ಅವರು, ಪ್ರಶ್ನೆ ಪತ್ರಿಕೆ ಸೋರಿಕೆ ಕೇವಲ ನೀಟ್ ಪರೀಕ್ಷೆಗೆ ಸೀಮಿತವಾಗಿಲ್ಲ. ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರ ಕಾಲೇಜು ಹಾಗೂ ಪೊಲೀಸ್ ಕಾನ್‌ಸ್ಟೇಬಲ್ ನೇಮಕಾತಿ ಪರೀಕ್ಷೆಯಲ್ಲೂ ಅಕ್ರಮ ನಡೆದಿದೆ ಎಂಬ ಆರೋಪಗಳಿವೆ. ಈ ಬಗ್ಗೆ ಸರ್ಕಾರ ಉತ್ತರ ನೀಡಬೇಕು ಎಂದು ಆಗ್ರಹಿಸಿದರು.


ಕೆಪಿಎಸ್‌ಸಿ ಅಕ್ರಮ ಖಂಡಿಸಿ ಪಶುವೈದ್ಯರು ಹಾಗೂ ಕೃಷಿ ವಿಶ್ವವಿದ್ಯಾಲಯದ ಅಭ್ಯರ್ಥಿಗಳು ಫ್ರೀಡಂ ಪಾರ್ಕ್‌ನಲ್ಲಿ ಪ್ರತಿಭಟನೆ ನಡೆಸುತ್ತಿದ್ದಾರೆ. ಇಂತಹ ಅಕ್ರಮ ಪ್ರಕರಣಗಳನ್ನು ಸರ್ಕಾರ ಸಿಬಿಐ ತನಿಖೆಗೆ ಏಕೆ ನೀಡುತ್ತಿಲ್ಲ ಎಂದು ಪ್ರಶ್ನಿಸಿದರು.

ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರ ರಾಜೀನಾಮೆಗೆ ಕಾಂಗ್ರೆಸ್ ಒತ್ತಡ ಹೇರುತ್ತಿದೆ ಎಂದು ಆರೋಪಿಸಿದ ಛಲವಾದಿ ನಾರಾಯಣಸ್ವಾಮಿ, ಮುಖ್ಯಮಂತ್ರಿ ಅವರು ಎರಡು ಬಾರಿ ಹೊರಟ್ಟಿ ಅವರಿಗೆ ಕರೆ ಮಾಡಿ ರಾಜೀನಾಮೆ ಕೇಳಿದ್ದಾರೆ. ಅಲ್ಲದೇ, ಮನೆಗೆ ಕರೆಸಿಕೊಂಡು ಒತ್ತಡ ಹೇರಿದ್ದಾರೆ ಎಂದು ಆರೋಪಿಸಿದರು.

ಸಭಾಪತಿಗಳನ್ನು ಮುಖ್ಯಮಂತ್ರಿ ತಮ್ಮ ನಿವಾಸಕ್ಕೆ ಕರೆಸಿಕೊಂಡಿರುವುದು ಶಿಷ್ಟಾಚಾರದ ಉಲ್ಲಂಘನೆ. ಮುಖ್ಯಮಂತ್ರಿಗಳೇ ಅವರ ಮನೆಗೆ ತೆರಳಿದ್ದರೆ ಅದು ಸೂಕ್ತವಾಗುತ್ತಿತ್ತು ಎಂದರು. ಹಿಂದೆ ವಿರೋಧ ಪಕ್ಷದವರು ಸಭಾಪತಿ ಸ್ಥಾನದಲ್ಲಿದ್ದಾಗ ಅವರನ್ನು ಗೌರವಿಸುವ ಸಂಪ್ರದಾಯ ಇತ್ತು. ಆದರೆ, ಕಾಂಗ್ರೆಸ್ ಈಗ ಅವಿಶ್ವಾಸ ನಿರ್ಣಯದ ಬೆದರಿಕೆ ಹಾಕುತ್ತಿದೆ. ಎಐಸಿಸಿ ಲೆಟರ್ ಹೆಡ್‌ನಲ್ಲಿ ಸಭಾಪತಿಗಳ ಹೆಸರು ಉಲ್ಲೇಖಿಸಿರುವುದು ಸದನ ಹಾಗೂ ಸಂವಿಧಾನಕ್ಕೆ ಮಾಡಿದ ಅವಮಾನ ಎಂದು ಆರೋಪಿಸಿದರು.

ಈ ವಿಚಾರದ ನೈತಿಕ ಹೊಣೆ ಹೊತ್ತು ಮಲ್ಲಿಕಾರ್ಜುನ ಖರ್ಗೆ ಅವರು ರಾಜೀನಾಮೆ ನೀಡಬೇಕು ಎಂದು ಒತ್ತಾಯಿಸಿದರು. ಇದೇ ವೇಳೆ ಬಸವರಾಜ ಹೊರಟ್ಟಿ ಅವರಿಗೆ ಬೆಂಬಲ ಸೂಚಿಸಿದ ಅವರು, ಯಾವುದೇ ಕಾರಣಕ್ಕೂ ಬೆದರದೆ ನಿಯಮಗಳ ಪ್ರಕಾರ ಕಾರ್ಯನಿರ್ವಹಿಸಿ. ನಿಮ್ಮ ಜೊತೆ ನಾವಿದ್ದೇವೆ ಎಂದು ಧೈರ್ಯ ತುಂಬಿದರು.

# ಅನಾಮಧೇಯ ಯುವತಿಯ ಶವ ಪತ್ತೆ: ಕೊಲೆ ಮಾಡಿ ಕೃಷಿ ಹೊಂಡಕ್ಕೆ ಎಸೆದ ಶಂಕೆ



**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ರೋಣ ತಾಲೂಕಿನ ಮಲ್ಲಾಪೂರ ಗ್ರಾಮದ ಹೊರವಲಯದ ಕೃಷಿ ಹೊಂಡದಲ್ಲಿ 25ರಿಂದ 28 ವರ್ಷದ ಅನಾಮಧೇಯ ಯುವತಿಯ ಶವ ಪತ್ತೆಯಾಗಿದ್ದು, ಗುರುತು ಪತ್ತೆಗಾಗಿ ರೋಣ ಪೊಲೀಸರು ಸಾರ್ವಜನಿಕರ ಸಹಕಾರ ಕೋರಿದ್ದಾರೆ. ಆಗಸ್ಟ್ 3ರ ಬೆಳಿಗ್ಗೆ 9.30ರಿಂದ ಆಗಸ್ಟ್ 4ರ ಬೆಳಿಗ್ಗೆ 8.20ರ ನಡುವಿನ ಅವಧಿಯಲ್ಲಿ ಅಪರಿಚಿತರು ಯುವತಿಯನ್ನು ಕಲ್ಲಿನಿಂದ ತಲೆಗೆ ಜಜ್ಜಿ, ಕುತ್ತಿಗೆಯಲ್ಲಿದ್ದ ತಾಳಿ ಸರವನ್ನು ಜಗ್ಗಿ ಕೊಲೆ ಮಾಡಿರುವ ಶಂಕೆ ವ್ಯಕ್ತವಾಗಿದೆ. ಬಳಿಕ ಸಾಕ್ಷ್ಯ ನಾಶಪಡಿಸುವ ಉದ್ದೇಶದಿಂದ ಮಲ್ಲಾಪೂರ ಗ್ರಾಮದ ಅಂದಪ್ಪ ಭೀಮಪ್ಪ ಕೌಜಗೇರಿ ಅವರ ಹೊಲದ ಕೃಷಿ ಹೊಂಡಕ್ಕೆ ಶವ ಎಸೆದಿರುವುದಾಗಿ ದೂರಿನಲ್ಲಿ ಆರೋಪಿಸಲಾಗಿದೆ. ಈ ಸಂಬಂಧ ರೋಣ ಪೊಲೀಸ್ ಠಾಣೆಯಲ್ಲಿ ಗುನ್ನಾ ಸಂಖ್ಯೆ 150/2026ರಡಿ ಬಿಎನ್‌ಎಸ್ ಕಲಂ 103(1) ಹಾಗೂ 238ರ ಅಡಿಯಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ಮುಂದುವರಿದಿದೆ.

ಮೃತ ಯುವತಿಯು ಸುಮಾರು 5 ಅಡಿ ಎತ್ತರ, ಸಾಧಾರಣ ಮೈಬಣ್ಣ, ದುಂಡುಮುಖ ಹೊಂದಿದ್ದು, ಕಪ್ಪು ಬಣ್ಣದ ಜಂಪರ್ ಹಾಗೂ ಕೆಂಪು ಬಣ್ಣದ ಲಂಗ ಧರಿಸಿದ್ದಾಳೆ. ಕೊರಳಲ್ಲಿ ಬಂಗಾರದ ಮಾದರಿಯ ತಾಳಿ, ಕಪ್ಪು ದಾರದಲ್ಲಿ ಕಲಾವತಿ ಮಾತೆಯ ಲಾಕೆಟ್, ಕೈಗಳಲ್ಲಿ ಹಸಿರು ಹಾಗೂ ಬಂಗಾರದ ಮಾದರಿಯ ಬಳೆಗಳು, ಕಾಲುಗಳಲ್ಲಿ ಬೆಳ್ಳಿಯ ಚೈನ್ ಮತ್ತು ಕಾಲುಂಗುರ, ಕಿವಿಯಲ್ಲಿ ಬಂಗಾರದ ಮಾದರಿಯ ಓಲೆಗಳಿವೆ.

ಈ ಚಹರೆಯ ಯುವತಿಯ ಬಗ್ಗೆ ಮಾಹಿತಿ ಇರುವವರು ರೋಣ ಪೊಲೀಸ್ ಠಾಣೆಯ ಪಿಎಸ್‌ಐ ಪ್ರಕಾಶ ಬಣಕಾರ (ಮೊ. 9480804457), ಸಿಪಿಐ ವಿಜಯಕುಮಾರ (ಮೊ. 9480804434) ಅಥವಾ ಗದಗ ಪೊಲೀಸ್ ಕಂಟ್ರೋಲ್ ರೂಂ (9480804400)ಗೆ ಮಾಹಿತಿ ನೀಡುವಂತೆ ಪ್ರಕಟಣೆಯಲ್ಲಿ ಮನವಿ ಮಾಡಿದೆ.

### ಶ್ರೀ ಕಾಶಿಲಿಂಗೇಶ್ವರ ದೇವಸ್ಥಾನದ ಪ್ರಥಮ ವಾರ್ಷಿಕೋತ್ಸವ ಸಂಭ್ರಮದಲ್ಲಿ ಎಸ್.ವಿ. ಸಂಕನೂರ

# ಆಧ್ಯಾತ್ಮಿಕತೆಯೇ ಭಾರತದ ನಿಜವಾದ ಶ್ರೀಮಂತಿಕೆ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಶ್ರೀ ಕಾಶಿಲಿಂಗೇಶ್ವರ ದೇವಸ್ಥಾನದ ಪ್ರಥಮ ವಾರ್ಷಿಕೋತ್ಸವ ಸಮಾರಂಭವು ಮಂಗಳವಾರ ಭಕ್ತಿಭಾವದಿಂದ ಹಾಗೂ ವಿವಿಧ ಧಾರ್ಮಿಕ ಕಾರ್ಯಕ್ರಮಗಳೊಂದಿಗೆ ಅದ್ದೂರಿಯಾಗಿ ನೆರವೇರಿತು.

ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ವಿಧಾನ ಪರಿಷತ್ ಸದಸ್ಯ ಎಸ್.ವಿ. ಸಂಕನೂರ, ಅಮೆರಿಕದಂತಹ ದೇಶಗಳು ಆರ್ಥಿಕವಾಗಿ ಶ್ರೀಮಂತವಾಗಿರಬಹುದು. ಆದರೆ ಭಾರತ ಆಧ್ಯಾತ್ಮಿಕ ಸಂಪತ್ತಿನಲ್ಲಿ ವಿಶ್ವದಲ್ಲೇ ಶ್ರೀಮಂತ ರಾಷ್ಟ್ರವಾಗಿದೆ. ಧಾರ್ಮಿಕ ಮೌಲ್ಯಗಳು ಮತ್ತು ಸಂಸ್ಕೃತಿಯ ನೆಲೆಯ ಮೇಲೆ ದೇಶ ಮುನ್ನಡೆಯುತ್ತಿದ್ದು, ದೇವರ ಮೇಲಿನ ನಂಬಿಕೆ ಹಾಗೂ ಸತ್ಕಾರ್ಯಗಳ ಮೂಲಕ ಜೀವನ ಸಾರ್ಥಕವಾಗುತ್ತದೆ ಎಂದು ಹೇಳಿದರು.

ದಿವ್ಯ ಸಾನಿಧ್ಯ ವಹಿಸಿದ್ದ ಓಂಕಾರಗಿರಿ ಮಲ್ಲಸಮುದ್ರದ ಶ್ರೀ ಫಕೀರೇಶ್ವರ ಶಿವಾಚಾರ್ಯ ಮಹಾಸ್ವಾಮಿಗಳು, ದೇವರು ಎಲ್ಲೋ ದೂರದಲ್ಲಿಲ್ಲ; ತಂದೆ-ತಾಯಿಗಳ ರೂಪದಲ್ಲೇ ನೆಲೆಸಿದ್ದಾನೆ. ಮಾನವೀಯತೆ, ವಿಶ್ವಾಸ ಹಾಗೂ ಎಲ್ಲರೂ ಒಂದೇ ಎಂಬ ಭಾವನೆಯೇ ನಿಜವಾದ ದೈವತ್ವ ಎಂದು ಆಶೀರ್ವಚನ ನೀಡಿದರು.

ಕಣ್ಣಿಪ್ಲಿಯ ಕಲ್ಮಠದ ಅಭಿನವ ಪ್ರಭು ಮಹಾಸ್ವಾಮಿಗಳು ಮಾತನಾಡಿ, ಗುರುವಿನ ಸಾನ್ನಿಧ್ಯವು ಮನುಷ್ಯನ ದುರ್ಗುಣಗಳನ್ನು ದೂರ ಮಾಡಿ ಸನ್ಮಾರ್ಗದತ್ತ ಕೊಂಡೊಯ್ಯುತ್ತದೆ ಎಂದು ತಿಳಿಸಿದರು. ನಗರಸಭೆ ಮಾಜಿ ಅಧ್ಯಕ್ಷೆ ಉಷಾ ದಾಸರ ಮಾತನಾಡಿ, ಕಾಯ, ವಾಚಾ ಮತ್ತು ಮನಸಾ ಮಾಡುವ ಪ್ರತಿಯೊಂದು ಸತ್ಕಾರ್ಯವೂ ಶ್ರೇಷ್ಠವಾದ ಪೂಜೆಯಾಗಿದೆ ಎಂದು ಹೇಳಿದರು.


ಅಧ್ಯಕ್ಷತೆ ವಹಿಸಿದ್ದ ಶ್ರೀ ಕಾಶಿಲಿಂಗೇಶ್ವರ ಸೇವಾ ಟ್ರಸ್ಟ್ ಅಧ್ಯಕ್ಷ ಡಾ. ಕಲ್ಲೇಶ ಮೂರಶಿಳ್ಳಿನ ಮಾತನಾಡಿ, ದೇವಸ್ಥಾನಗಳು ಕೇವಲ ಪೂಜಾ ಸ್ಥಳಗಳಲ್ಲ; ಸಮಾಜದಲ್ಲಿ ಸತ್ಪ್ರವೃತ್ತಿ ಬೆಳೆಸುವ ಹಾಗೂ ಜನರನ್ನು ಉತ್ತಮ ಜೀವನ ಮೌಲ್ಯಗಳತ್ತ ಕೊಂಡೊಯ್ಯುವ ಕೇಂದ್ರಗಳಾಗಿವೆ ಎಂದು ಹೇಳಿದರು.

ಟ್ರಸ್ಟ್ ಉಪಾಧ್ಯಕ್ಷ ಎಂ.ಆರ್. ಸೋಂಪುರ ಪ್ರಾಸ್ತಾವಿಕವಾಗಿ ಮಾತನಾಡಿ, ಅನೇಕ ಭಕ್ತರ ಶ್ರಮದಾನದ ಫಲವಾಗಿ ದೇವಸ್ಥಾನ ನಿರ್ಮಾಣವಾಗಿದ್ದು, ಇದು ಬಡಾವಣೆಯ ಹೆಮ್ಮೆಯ ಕೇಂದ್ರವಾಗಿ ರೂಪುಗೊಂಡಿದೆ ಎಂದರು.

ಕಾರ್ಯಕ್ರಮದಲ್ಲಿ ಅನ್ನಸಂತರ್ಪಣೆಯ ದಾನಿಗಳನ್ನು ಸನ್ಮಾನಿಸಲಾಯಿತು. ಮಹಿಳಾ ಘಟಕದ ವತಿಯಿಂದ ನೂರಾರು ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ ನೆರವೇರಿತು.

ಈ ಸಂದರ್ಭದಲ್ಲಿ ಟ್ರಸ್ಟ್ ಕಾರ್ಯದರ್ಶಿ ಎಚ್.ಬಿ. ಆದಪ್ಪ, ಸಾಯಿಬಾಬೂಜಿ ನಗರಾಭಿವೃದ್ಧಿ ಅಧ್ಯಕ್ಷ ಎನ್.ಕೆ. ತೊಂಡಿಹಾಳ, ಮಹಿಳಾ ಘಟಕದ ಅಧ್ಯಕ್ಷೆ ಲಕ್ಷ್ಮೀ ಮಡಿವಾಳ, ಗೌರವಾಧ್ಯಕ್ಷೆ ರತ್ನಕ್ಕ ಯಳಮಲಿ, ಮಲ್ಲಣ್ಣ ಅಂಗಡಿ ಸೇರಿದಂತೆ ಟ್ರಸ್ಟ್ ಪದಾಧಿಕಾರಿಗಳು, ಭಕ್ತರು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

# ಬಸವಣ್ಣನವರ ಚಿಂತನೆಗೆ ಬೆನ್ನೆಲುಬಾಗಿದ್ದ ಹಡಪದ ಅಪ್ಪಣ್ಣ



**ವಿಜಯಸಾಕ್ಷಿ ಸುದ್ದಿ, ಗದಗ**

12ನೇ ಶತಮಾನದಲ್ಲಿ ಬಸವಣ್ಣನವರ ಸಾಮಾಜಿಕ ಕ್ರಾಂತಿಗೆ ನೆರಳಾಗಿ ನಿಂತು, ಅವರ ಚಿಂತನೆಗಳನ್ನು ಕಾರ್ಯರೂಪಕ್ಕೆ ತರುವಲ್ಲಿ ಮಹತ್ವದ ಪಾತ್ರ ವಹಿಸಿದ್ದವರು ಶರಣ ಹಡಪದ ಅಪ್ಪಣ್ಣ ಎಂದು ಕಿತ್ತಲಿಯ ಶ್ರೀ ಅಭಿನವ ಸಿದ್ಧರಾಮ ಸ್ವಾಮೀಜಿ ಹೇಳಿದರು.

ಲಿಂಗಾಯತ ಪ್ರಗತಿಶೀಲ ಸಂಘದ 2809ನೇ ಶಿವಾನುಭವ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಅವರು, ಶಿವಾನುಭವದಂತಹ ಧಾರ್ಮಿಕ ಕಾರ್ಯಕ್ರಮಗಳು ಮನಸ್ಸಿನ ಮಲಿನತೆಯನ್ನು ದೂರ ಮಾಡಿ ಸಂಸ್ಕಾರಯುತ ಸಮಾಜ ನಿರ್ಮಾಣಕ್ಕೆ ಪೂರಕವಾಗುತ್ತವೆ ಎಂದರು.

12ನೇ ಶತಮಾನದ ಶರಣರು ವಚನಗಳ ಮೂಲಕ ಸಮಾಜದಲ್ಲಿದ್ದ ಮೌಢ್ಯತೆ, ಅಸಮಾನತೆ ಮತ್ತು ಕಂದಾಚಾರಗಳನ್ನು ತೊಡೆದುಹಾಕಿ ಸಮಾನತೆಯ ಸಂದೇಶ ಸಾರಿದರು. ಅಂತಹ ಮಹಾನ್ ಶರಣರಲ್ಲಿ ಹಡಪದ ಅಪ್ಪಣ್ಣ ಪ್ರಮುಖರಾಗಿದ್ದು, ಅವರ ಆದರ್ಶ ಮತ್ತು ಮೌಲ್ಯಗಳನ್ನು ಇಂದಿನ ಸಮಾಜ ಅಳವಡಿಸಿಕೊಳ್ಳಬೇಕೆಂದು ಕರೆ ನೀಡಿದರು. ಹಡಪದ ಅಪ್ಪಣ್ಣ ಹಾಗೂ ಶರಣೆ ಲಿಂಗಮ್ಮ ಅವರ ಕುರಿತು ಉಪನ್ಯಾಸ ನೀಡಿದ ಹಡಪದ ಅಪ್ಪಣ್ಣ ಸಮಾಜ ಸೇವಾ ಸಂಘದ ಜಿಲ್ಲಾ ಪ್ರಧಾನ ಕಾರ್ಯದರ್ಶಿ ಎ.ವಿ. ಪ್ರಭು, ಬಸವಣ್ಣನವರ ಸಾಮಾಜಿಕ ಪರಿವರ್ತನೆಯ ಕಾರ್ಯದಲ್ಲಿ ಹಡಪದ ಅಪ್ಪಣ್ಣ ಅವರ ಸಂಘಟನಾ ಸಾಮರ್ಥ್ಯ ಮತ್ತು ಮಾರ್ಗದರ್ಶನ ಅತ್ಯಂತ ಮಹತ್ವದ್ದಾಗಿತ್ತು. ಅವರ ವಾರಸುದಾರರು ಶರಣರ ಮೌಲ್ಯಗಳಿಗೆ ತಕ್ಕಂತೆ ಬದುಕಬೇಕು ಎಂದು ಹೇಳಿದರು.


**ಬಸವಣ್ಣನವರ ನೆರಳಾಗಿ ಸಮಾಜ ಪರಿವರ್ತನೆಯ ಕಾರ್ಯದಲ್ಲಿ ಹಡಪದ ಅಪ್ಪಣ್ಣ ಸಲ್ಲಿಸಿದ ಸೇವೆ ಇಂದಿಗೂ ಆದರ್ಶಪ್ರಾಯವಾಗಿದೆ. ಅವರ ಮೌಲ್ಯಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳುವುದೇ ಅವರಿಗೆ ಸಲ್ಲಿಸುವ ನಿಜವಾದ ಗೌರವ.**
**– ಕಿತ್ತಲಿಯ ಶ್ರೀ ಅಭಿನವ ಸಿದ್ಧರಾಮ ಸ್ವಾಮೀಜಿ**

ಸಂಘದ ಜಿಲ್ಲಾಧ್ಯಕ್ಷ ಮೋಹನ ಚಂದಪ್ಪನವರ ಮಾತನಾಡಿ, ಲಿಂಗೈಕ್ಯ ಡಾ. ಸಿದ್ಧಲಿಂಗ ಮಹಾಸ್ವಾಮಿಗಳು ಹಡಪದ ಸಮಾಜದಲ್ಲಿ ಆತ್ಮಗೌರವ ಮತ್ತು ಸಂಘಟನೆಯ ಹೊಸ ಚೈತನ್ಯ ಮೂಡಿಸಿದ ಮಹನೀಯರು ಎಂದು ಸ್ಮರಿಸಿದರು.

ಕಾರ್ಯಕ್ರಮದಲ್ಲಿ ಹಿರಿಯ ಸಾಹಿತಿ ಡಿ.ವಿ. ಬಡಿಗೇರ, ನ್ಯಾಯವಾದಿ ಮೆಹರ್ವಾಡೆ, ದಾನಯ್ಯ ಗಣಾಚಾರಿ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು. ವಚನ ಸಂಗೀತ, ಧರ್ಮಗ್ರಂಥ ಪಠಣ ಹಾಗೂ ಶಿವಾನುಭವ ಕಾರ್ಯಕ್ರಮಗಳು ಜರುಗಿದವು.

## ಸಂಕ್ಷಿಪ್ತ ಸುದ್ದಿಗಳು

### ಗದಗ-ಸಿಂಗಾಪುರ ಶಾಲೆಗಳ ವಿದ್ಯಾರ್ಥಿಗಳ ಅಂತರರಾಷ್ಟ್ರೀಯ ಸಂವಾದ




**ವಿಜಯಸಾಕ್ಷಿ ಸುದ್ದಿ, ಗದಗ**

ನಗರದ ಬಾಲ ವಿನಾಯಕ ವಿದ್ಯಾನಿಕೇತನ (ಬಿವಿವಿ) ಶಾಲೆ ಹಾಗೂ ಸಿಂಗಾಪುರದ ಬೆಂಡೆಮಿಯರ್ ಪ್ರಾಥಮಿಕ ಶಾಲೆಯ ವಿದ್ಯಾರ್ಥಿಗಳ ನಡುವೆ ಆನ್‌ಲೈನ್ ಮೂಲಕ ಅಂತರರಾಷ್ಟ್ರೀಯ ವಿದ್ಯಾರ್ಥಿ ವಿನಿಮಯ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು.

ಕಾರ್ಯಕ್ರಮದಲ್ಲಿ ಬಿವಿವಿ ಶಾಲೆಯ ವಿದ್ಯಾರ್ಥಿಗಳು ಶಿಕ್ಷಕರ ದಿನಾಚರಣೆಯ ಸಂದರ್ಭದಲ್ಲಿ ವಿದ್ಯಾರ್ಥಿಗಳೇ ಶಿಕ್ಷಕರಾಗಿ ಹಾಗೂ ಶಾಲಾ ಆಡಳಿತ ನಿರ್ವಹಿಸುವ ಪದ್ಧತಿ, 'ಸಂಗಮ' ಚಟುವಟಿಕೆಗಳ ಮೂಲಕ ನಾಯಕತ್ವ ಕೌಶಲ ಬೆಳೆಸುವ ವಿಧಾನವನ್ನು ಪರಿಚಯಿಸಿದರು. ಈ ಕಾರ್ಯಕ್ರಮಗಳನ್ನು ತಮ್ಮ ಶಾಲೆಯಲ್ಲೂ ಅಳವಡಿಸಿಕೊಳ್ಳುವುದಾಗಿ ಸಿಂಗಾಪುರ ಶಾಲೆಯ ಪ್ರಾಚಾರ್ಯೆ ಟಾನ್ ಲಿಂ ಹಾಗೂ ಶಿಕ್ಷಕರು ಸಂತಸ ವ್ಯಕ್ತಪಡಿಸಿದರು.

ಸಿಂಗಾಪುರದ ವಿದ್ಯಾರ್ಥಿಗಳು ತಮ್ಮ ಶಾಲೆಯ 'ಬಡಿ ಪೇರಿಂಗ್' ಪದ್ಧತಿಯ ಕುರಿತು ವಿವರಿಸಿ, ಹಿರಿಯ ವಿದ್ಯಾರ್ಥಿಗಳು ಕಿರಿಯ ವಿದ್ಯಾರ್ಥಿಗಳಿಗೆ ಶಾಲಾ ಶಿಸ್ತು ಮತ್ತು ಹೊಂದಾಣಿಕೆಯ ಕುರಿತು ಮಾರ್ಗದರ್ಶನ ನೀಡುವ ವಿಧಾನವನ್ನು ಹಂಚಿಕೊಂಡರು.

ಬಿವಿವಿ ಶಾಲೆಯ ನಿರ್ದೇಶಕ ವಿನಾಯಕ ಆರ್. ಕಾರ್ಯಕ್ರಮವನ್ನು ಶ್ಲಾಘಿಸಿದರು. ಕಾರ್ಯಕ್ರಮದಲ್ಲಿ ಉಭಯ ಶಾಲೆಗಳ ವಿದ್ಯಾರ್ಥಿಗಳು ಸಕ್ರಿಯವಾಗಿ ಭಾಗವಹಿಸಿ, ಕೊನೆಯಲ್ಲಿ ಪರಸ್ಪರ ಶಾಲಾ ಗೀತೆಗಳಿಗೆ ಗೌರವ ಸಲ್ಲಿಸಿದರು. ಶಾಲೆಯ ಕಾರ್ಯದರ್ಶಿ ರವಿ ಎಸ್., ಇಎಲ್‌ಸಿ ಅಧ್ಯಕ್ಷೆ ಮಲ್ಲಿಕಾ ಆರ್., ಉಪನಿರ್ದೇಶಕಿ ಗಾಯತ್ರಿ ವಿ., ಪ್ರಾಚಾರ್ಯ ವಿ.ಎಂ. ಅಡ್ನೂರ, ಉಪಪ್ರಾಚಾರ್ಯ ಪಿ.ಜಿ. ಬ್ಯಾಳಿ ಸೇರಿದಂತೆ ಶಿಕ್ಷಕ ವೃಂದ ಕಾರ್ಯಕ್ರಮಕ್ಕೆ ಅಭಿನಂದನೆ ಸಲ್ಲಿಸಿದರು.

### ಬೆಂಕಿಪೊಟ್ಟಣ ಕೊಡಲಿಲ್ಲವೆಂದು ಸೆಕ್ಯುರಿಟಿ ಗಾರ್ಡ್ ಮೇಲೆ ಹಲ್ಲೆ? ಉದ್ಯಮಿ ಆದಿಕೇಶವುಲು ಮೊಮ್ಮಗ ವಿರುದ್ಧ ಮತ್ತೊಂದು ಆರೋಪ

**ವಿಜಯಸಾಕ್ಷಿ ಸುದ್ದಿ, ಬೆಂಗಳೂರು**



ಉದ್ಯಮಿ ಆದಿಕೇಶವುಲು ಕುಟುಂಬದ ವಿರುದ್ಧ ಮತ್ತೊಮ್ಮೆ ಗಂಭೀರ ಆರೋಪ ಕೇಳಿಬಂದಿದೆ. ಸಿಗರೇಟ್ ಹಚ್ಚಲು ಬೆಂಕಿಪೊಟ್ಟಣ ನೀಡಲಿಲ್ಲ ಎಂಬ ಕಾರಣಕ್ಕೆ ಅಪಾರ್ಟ್‌ಮೆಂಟ್‌ನ ಸೆಕ್ಯುರಿಟಿ ಗಾರ್ಡ್ ಮೇಲೆ ಹಲ್ಲೆ ನಡೆಸಿರುವ ಆರೋಪ ಆದಿಕೇಶವುಲು ಅವರ ಮೊಮ್ಮಗನ ವಿರುದ್ಧ ಕೇಳಿಬಂದಿದೆ.

ಘಟನೆ ಸಂಬಂಧ ದೂರು ದಾಖಲಾಗಿದ್ದರೂ, ಪೊಲೀಸರು ಎನ್‌ಸಿಆರ್ ಮಾತ್ರ ದಾಖಲಿಸಿರುವುದು ಪ್ರಶ್ನೆಗೆ ಕಾರಣವಾಗಿದೆ.

ಸಿದ್ದಾಪುರ ಪೊಲೀಸ್ ಠಾಣೆ ವ್ಯಾಪ್ತಿಯ ರಾಜ ಪ್ರಕೃತಿ ಅಪಾರ್ಟ್‌ಮೆಂಟ್‌ನಲ್ಲಿ ಈ ಘಟನೆ ನಡೆದಿದೆ. ಅಪಾರ್ಟ್‌ಮೆಂಟ್‌ನ ಸೆಕ್ಯುರಿಟಿ ಗಾರ್ಡ್ ಪ್ರಕಾಶ್ ಅವರ ಮೇಲೆ ಹಲ್ಲೆ ನಡೆದಿರುವುದಾಗಿ ಆರೋಪಿಸಲಾಗಿದೆ.

ಮಾಹಿತಿಯ ಪ್ರಕಾರ, ಆದಿಕೇಶವುಲು ಅವರ ಮೊಮ್ಮಗ ಸಿಗರೇಟ್ ಸೇದಲು ಬೆಂಕಿಪೊಟ್ಟಣ ಕೇಳಿದ್ದು, ಸೆಕ್ಯುರಿಟಿ ಗಾರ್ಡ್ ಇಲ್ಲ ಎಂದು ಉತ್ತರಿಸಿದ ಹಿನ್ನೆಲೆಯಲ್ಲಿ ಕೋಪಗೊಂಡು ಹಲ್ಲೆ ನಡೆಸಿದ್ದಾರೆ ಎನ್ನಲಾಗಿದೆ. ಇದೇ ವೇಳೆ ಅಪಾರ್ಟ್‌ಮೆಂಟ್ ಪಾರ್ಕಿಂಗ್ ಪ್ರದೇಶದಲ್ಲಿ ಅಡ್ಡಾದಿಡ್ಡಿಯಾಗಿ ಕಾರು ಚಲಾಯಿಸಿ ನಿವಾಸಿಗಳ ಆತಂಕಕ್ಕೂ ಕಾರಣರಾಗಿದ್ದಾರೆ ಎಂಬ ಆರೋಪವೂ ಕೇಳಿಬಂದಿದೆ.

ಘಟನೆ ಬಳಿಕ ಸೆಕ್ಯುರಿಟಿ ಗಾರ್ಡ್ ಪ್ರಕಾಶ್ ಸಿದ್ದಾಪುರ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ. ಆದರೆ ಪೊಲೀಸರು ಎಫ್‌ಐಆರ್ ದಾಖಲಿಸದೆ ಎನ್‌ಸಿಆರ್ ಮಾತ್ರ ದಾಖಲಿಸಿದ್ದಾರೆ. ಈ ಹಿನ್ನೆಲೆಯಲ್ಲಿ ಎಫ್‌ಐಆರ್ ದಾಖಲಿಸುವಂತೆ ಡಿಸಿಪಿಗೆ ಪ್ರತ್ಯೇಕ ದೂರು ಸಲ್ಲಿಸಲಾಗಿದೆ.

ಆದಿಕೇಶವುಲು ಕುಟುಂಬದ ಹೆಸರು ಈ ಹಿಂದೆ ಕೂಡ ಹಲವು ವಿವಾದಗಳಲ್ಲಿ ಕೇಳಿಬಂದಿತ್ತು. 2019ರಲ್ಲಿ ಅವರ ಆಪ್ತ ರಘುನಾಥ್ ಅನುಮಾನಾಸ್ಪದ ಸಾವಿನ ಪ್ರಕರಣ, ಗೀತಾ ವಿಷ್ಣು ಮೇಲಿನ ಹಲ್ಲೆ ಪ್ರಕರಣ, 2017ರ ಎಸ್‌ಯುವಿ ಅಪಘಾತ ಹಾಗೂ ಪೊಲೀಸ್ ಕಸ್ಟಡಿಯಿಂದ ಪರಾರಿಯಾದ ಪ್ರಕರಣ, ನಾಯಿ ಮೇಲೆ ಕಾರು ಹತ್ತಿಸಿದ ಆರೋಪ ಸೇರಿದಂತೆ ಹಲವು ಪ್ರಕರಣಗಳು ಈ ಕುಟುಂಬದ ಸುತ್ತ ಸದ್ದು ಮಾಡಿದ್ದವು.

### ನಾಳೆ ನೇರ ಸಂದರ್ಶನ

**ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಆಗಸ್ಟ್ 8ರಂದು ಬೆಳಿಗ್ಗೆ 10 ಗಂಟೆಗೆ ಗದಗದ ಹೊಸ ಬಸ್ ನಿಲ್ದಾಣ ರಸ್ತೆಯ ಯಮಹಾ ಶೋರೂಂ ಎದುರಿನ ಟಾಟಾ ಕ್ಯಾಪಿಟಲ್ ಕಚೇರಿಯಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ.

ಈ ಸಂದರ್ಶನದಲ್ಲಿ ಟಾಟಾ ಕ್ಯಾಪಿಟಲ್, ಗದಗ ಸಂಸ್ಥೆ ಭಾಗವಹಿಸಲಿದ್ದು, ಲೋನ್ ಆಫೀಸರ್ ಹುದ್ದೆಗಳಿಗೆ ನೇಮಕಾತಿ ನಡೆಯಲಿದೆ. ಪಿಯುಸಿ ಅಥವಾ ಯಾವುದೇ ಪದವಿ ವಿದ್ಯಾರ್ಹತೆ ಹೊಂದಿರುವ 18ರಿಂದ 28 ವರ್ಷದ ಅಭ್ಯರ್ಥಿಗಳು ಸಂದರ್ಶನದಲ್ಲಿ ಭಾಗವಹಿಸಬಹುದು. ಆಯ್ಕೆಯಾದ ಅಭ್ಯರ್ಥಿಗಳಿಗೆ ಗದಗದಲ್ಲೇ ಕೆಲಸದ ಅವಕಾಶ ದೊರೆಯಲಿದೆ.

ಅಭ್ಯರ್ಥಿಗಳು ತಮ್ಮ ವಿದ್ಯಾರ್ಹತೆಯ ಅಂಕಪಟ್ಟಿಗಳ ಜೆರಾಕ್ಸ್ ಪ್ರತಿಗಳು, ಎರಡು ಬಯೋಡಾಟಾ (ರೆಸ್ಯೂಮ್) ಹಾಗೂ ಆಧಾರ್ ಕಾರ್ಡ್ ಜೆರಾಕ್ಸ್ ಪ್ರತಿಯೊಂದಿಗೆ ಹಾಜರಾಗಬೇಕು. ಸಂದರ್ಶನದ ದಿನವೇ ನೋಂದಣಿ ಕಡ್ಡಾಯವಾಗಿದ್ದು, ಯುವನಿಧಿ ಯೋಜನೆಯ ಫಲಾನುಭವಿಗಳು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಜಿಲ್ಲಾ ಉದ್ಯೋಗಾಧಿಕಾರಿ ಬಸವಂತ ಪಿ.ಎನ್. ಪ್ರಕಟಣೆಯಲ್ಲಿ ತಿಳಿಸಿದ್ದಾರೆ. ಹೆಚ್ಚಿನ ಮಾಹಿತಿಗಾಗಿ 6363330688, 9019436490 ಹಾಗೂ 6364931181 ಸಂಖ್ಯೆಗಳನ್ನು ಸಂಪರ್ಕಿಸಬಹುದು.

## ಬೆಳೆ ಹಾನಿ ಪರಿಶೀಲಿಸಿ ಸರ್ಕಾರದ ಗಮನಕ್ಕೆ ವಾಸ್ತವ ವರದಿ | ಬೆಳೆ ವಿಮೆ ಸೇರಿ ಎಲ್ಲ ನೆರವಿನ ಭರವಸೆ

# ಹೊಲದಲ್ಲೇ ರೈತರ ನೋವು ಆಲಿಸಿದ ಸಚಿವ ಲಾಡ್

**ವಿಜಯಸಾಕ್ಷಿ ಸುದ್ದಿ, ಧಾರವಾಡ**



ಮಳೆ ಬಂದರೂ ಸಮಯಕ್ಕೆ ಬರಲಿಲ್ಲ... ಹೊಲಗಳು ಹಸಿರಾಗಿ ಕಾಣುತ್ತಿದ್ದರೂ ರೈತರ ಕೈಗೆ ಬೆಳೆ ಬಂದಿಲ್ಲ... ಇಂತಹ ಸಂಕಷ್ಟದ ಪರಿಸ್ಥಿತಿಯನ್ನು ಸ್ವತಃ ಹೊಲಗಳಿಗೆ ತೆರಳಿ ವೀಕ್ಷಿಸಿದ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ್ ಲಾಡ್ ಅವರು, ರೈತರ ಸಮಸ್ಯೆಗಳನ್ನು ಸರ್ಕಾರದ ಗಮನಕ್ಕೆ ತಂದು ಅಗತ್ಯ ಪರಿಹಾರ ಕಲ್ಪಿಸುವುದಾಗಿ ಭರವಸೆ ನೀಡಿದರು.

ಮುಖ್ಯಮಂತ್ರಿಗಳ ಸೂಚನೆಯಂತೆ ಧಾರವಾಡ ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಬೆಳೆ ಹಾನಿ ಪರಿಶೀಲನೆ ನಡೆಸಿದ ಸಚಿವರು, ರೈತರು, ರೈತ ಮುಖಂಡರು ಹಾಗೂ ಕೃಷಿ ತಜ್ಞರೊಂದಿಗೆ ಚರ್ಚಿಸಿ ಬೆಳೆಗಳ ವಾಸ್ತವ ಸ್ಥಿತಿಯ ಕುರಿತು ಮಾಹಿತಿ ಸಂಗ್ರಹಿಸಿದರು.

ಜಿಲ್ಲೆಯ ಸುಮಾರು 2.90 ಲಕ್ಷ ಹೆಕ್ಟೇರ್ ಕೃಷಿಯೋಗ್ಯ ಭೂಮಿಯಲ್ಲಿ ಶೇ.96ರಷ್ಟು, ಅಂದರೆ 2.80 ಲಕ್ಷ ಹೆಕ್ಟೇರ್ ಪ್ರದೇಶದಲ್ಲಿ ಬಿತ್ತನೆ ನಡೆದಿದ್ದು, ಸುಮಾರು 45 ಸಾವಿರ ಹೆಕ್ಟೇರ್ ಪ್ರದೇಶದಲ್ಲಿ ಹೆಸರು ಹಾಗೂ ಉದ್ದು, 40 ಸಾವಿರ ಹೆಕ್ಟೇರ್‌ನಲ್ಲಿ ಮೆಕ್ಕೆಜೋಳ ಬೆಳೆಯಲಾಗಿದೆ. ಇದರ ಜೊತೆಗೆ ಸೋಯಾಬೀನ್, ಹತ್ತಿ, ಕಡಲೆಕಾಯಿ, ಕಬ್ಬು, ಈರುಳ್ಳಿ ಸೇರಿದಂತೆ ಹಲವು ಬೆಳೆಗಳು ಮಳೆಯ ವೈಪರೀತ್ಯದಿಂದ ಸಂಕಷ್ಟಕ್ಕೆ ಸಿಲುಕಿವೆ.

ಸಾಮಾನ್ಯವಾಗಿ ಹೊಲಗಳು ಹಸಿರಾಗಿ ಕಾಣುತ್ತಿದ್ದರೂ ಬೆಳೆಗಳ ಬೆಳವಣಿಗೆ ನಿರೀಕ್ಷಿತ ಮಟ್ಟದಲ್ಲಿಲ್ಲ. ಅಗತ್ಯ ಸಮಯದಲ್ಲಿ ಮಳೆಯಾಗದ ಪರಿಣಾಮ ಬೆಳೆಗಳು ಕುಂಠಿತಗೊಂಡಿದ್ದು, ರೈತರು ಭಾರೀ ನಷ್ಟ ಅನುಭವಿಸುವಂತಾಗಿದೆ. ಕೆಲವೆಡೆ ಹೆಚ್ಚು ಮಳೆಯಾದರೂ ಅದು ಸರಿಯಾದ ಸಮಯದಲ್ಲಿ ಮತ್ತು ಸಮರ್ಪಕ ಪ್ರಮಾಣದಲ್ಲಿ ಸುರಿಯದ ಕಾರಣ ಬೆಳೆಗಳಿಗೆ ಯಾವುದೇ ಪ್ರಯೋಜನವಾಗಿಲ್ಲ ಎಂದು ಸಚಿವರು ಹೇಳಿದರು.

ರೈತರ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸುವ ಉದ್ದೇಶದಿಂದ ಬೆಳೆ ವಿಮೆ ಸೇರಿದಂತೆ ಸರ್ಕಾರ ಹಾಗೂ ವಿಮಾ ಸಂಸ್ಥೆಗಳ ಮೂಲಕ ದೊರೆಯಬಹುದಾದ ಎಲ್ಲ ಸೌಲಭ್ಯಗಳನ್ನು ರೈತರಿಗೆ ತಲುಪಿಸಲು ಕ್ರಮ ಕೈಗೊಳ್ಳಲಾಗುವುದು. ಸ್ಥಳೀಯ ಶಾಸಕರು ಹಾಗೂ ರೈತ ಮುಖಂಡರ ಸಲಹೆಗಳನ್ನೂ ಕ್ರೋಡೀಕರಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಬರ ಘೋಷಣೆಗೆ ಕೇಂದ್ರ ಸರ್ಕಾರದ ನಿಗದಿತ ತಾಂತ್ರಿಕ ಮಾನದಂಡಗಳಿದ್ದು, ಅವುಗಳ ಅನ್ವಯವೇ ನಿರ್ಧಾರ ಕೈಗೊಳ್ಳಬೇಕಾಗುತ್ತದೆ. ಆದರೆ ಜಿಲ್ಲೆಯ ವಾಸ್ತವ ಸ್ಥಿತಿಯನ್ನು ರಾಜ್ಯ ಸರ್ಕಾರದ ಮೂಲಕ ಕೇಂದ್ರ ಸರ್ಕಾರದ ಗಮನಕ್ಕೆ ತಂದು ರೈತರಿಗೆ ಅಗತ್ಯ ನೆರವು ದೊರಕಿಸಲು ಪ್ರಯತ್ನಿಸಲಾಗುವುದು ಎಂದರು.

ನವಲಗುಂದ ಶಾಸಕ ಎನ್.ಎಚ್. ಕೋನರೆಡ್ಡಿ ಮಾತನಾಡಿ, ಅಲ್ಪ ಪ್ರಮಾಣದ ಮಳೆಯಾದ ಕಾರಣ ಹೆಸರು ಮತ್ತು ಹತ್ತಿ ಬೆಳೆಗಳು ಹೊರನೋಟಕ್ಕೆ ಹಸಿರಾಗಿದ್ದರೂ ಒಳಗೆ ಬೆಳೆ ಇಲ್ಲದಂತಾಗಿದೆ. ಹೆಸರು ಬೆಳೆ ಹೂ ಬಿಡದೆ ಒಣಗುವ ಸ್ಥಿತಿಗೆ ತಲುಪಿದ್ದು, ಹತ್ತಿ ಬೆಳೆಯಲ್ಲಿ ನಿರೀಕ್ಷಿತ ಪ್ರಮಾಣದಲ್ಲಿ ಕಾಯಿ ಬರುತ್ತಿಲ್ಲ. ಆದ್ದರಿಂದ ಪರಿಹಾರ ವಿತರಣೆಯ ಸಂದರ್ಭದಲ್ಲಿ ಸರ್ಕಾರ ಮಾನದಂಡಗಳನ್ನು ಸಡಿಲಿಸಿ ರೈತರಿಗೆ ಅನುಕೂಲವಾಗುವ ರೀತಿಯಲ್ಲಿ ಅಂಕಿ-ಅಂಶಗಳನ್ನು ಪರಿಗಣಿಸಬೇಕು ಎಂದು ಒತ್ತಾಯಿಸಿದರು.

ಕಳೆದ ಎರಡು ವರ್ಷಗಳಿಂದ ರೈತರಿಗೆ ಬೆಳೆ ವಿಮೆ ಸಮರ್ಪಕವಾಗಿ ದೊರೆಯದಿರುವ ಬಗ್ಗೆ ಆತಂಕ ವ್ಯಕ್ತಪಡಿಸಿದ ಅವರು, ಖಾಸಗಿ ವಿಮಾ ಕಂಪನಿಗಳಿಗಿಂತ ರೈತರ ಹಿತಾಸಕ್ತಿಗೆ ಆದ್ಯತೆ ನೀಡುವಂತೆ ಸರ್ಕಾರ ಕ್ರಮ ಕೈಗೊಳ್ಳಬೇಕು. ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹಾಗೂ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಗಮನಕ್ಕೂ ವಿಷಯವನ್ನು ತಂದು ರೈತರಿಗೆ ಪರಿಹಾರ ದೊರಕಿಸಲು ಪ್ರಯತ್ನಿಸಲಾಗುವುದು ಎಂದರು.

> **ಹೊಲಗಳಲ್ಲಿ ಹಸಿರು ಕಾಣುತ್ತಿದ್ದರೂ ಬೆಳೆಗಳ ಬೆಳವಣಿಗೆ ಸಮರ್ಪಕವಾಗಿಲ್ಲ. ರೈತರ ವಾಸ್ತವ ಸಮಸ್ಯೆಯನ್ನು ಸರ್ಕಾರದ ಗಮನಕ್ಕೆ ತಂದು, ಬೆಳೆ ವಿಮೆ ಸೇರಿದಂತೆ ಎಲ್ಲ ರೀತಿಯ ನೆರವು ದೊರಕಿಸುವ ಪ್ರಯತ್ನ ಮಾಡಲಾಗುವುದು.**
>
> **- ಸಂತೋಷ್ ಲಾಡ್,**
> ಜಿಲ್ಲಾ ಉಸ್ತುವಾರಿ ಸಚಿವ

ಸಚಿವ ಸಂತೋಷ್ ಲಾಡ್ ಅವರು ಧಾರವಾಡ ತಾಲೂಕಿನ ಹಾರೋಬೆಳವಡಿ ಹಾಗೂ ನವಲಗುಂದ ತಾಲೂಕಿನ ಶಿರೂರ, ಶಿರಕೋಳ, ಮೊರಬ ಮತ್ತು ತಿರ್ಲಾಪುರ ಗ್ರಾಮಗಳಿಗೆ ಭೇಟಿ ನೀಡಿ ರೈತರ ಹೊಲಗಳಲ್ಲಿ ಬೆಳೆಗಳ ಸ್ಥಿತಿಯನ್ನು ಪರಿಶೀಲಿಸಿದರು.

ಈ ವೇಳೆ ಜಿಲ್ಲಾಧಿಕಾರಿ ಸ್ನೇಹಲ್ ಆರ್., ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಗುಂಜನ್ ಆರ್ಯ, ಪ್ರೊಬೆಷನರಿ ಐಎಎಸ್ ಅಧಿಕಾರಿ ಅನುಪ್ರಿಯಾ ಸಾಕ್ಯಾ, ಉಪವಿಭಾಗಾಧಿಕಾರಿ ಪ್ರಭಾವತಿ ಫಕೀರಪುರ, ನವಲಗುಂದ ತಹಶೀಲ್ದಾರ್ ಸುಧೀರ ಸಾಹುಕಾರ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

## ನಾಳೆ ನಿಡಗುಂದಿಯಲ್ಲಿ ಗುರು ವಂದನೆ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಶ್ರೀ ಅನ್ನದಾನೇಶ್ವರ ಪ್ರೌಢಶಾಲೆ, ನಿಡಗುಂದಿಯ 2003-04ನೇ ಸಾಲಿನ ಹಳೆಯ ವಿದ್ಯಾರ್ಥಿಗಳ ವತಿಯಿಂದ 'ಗುರು ವಂದನಾ ಹಾಗೂ ಸ್ನೇಹ ಸಮ್ಮಿಲನ' ಕಾರ್ಯಕ್ರಮವನ್ನು ಆಗಸ್ಟ್ 8ರಂದು ಶನಿವಾರ ಶಾಲಾ ಆವರಣದಲ್ಲಿ ಆಯೋಜಿಸಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ಹಾಲಕೇರಿಯ ಶ್ರೀ ಜ. ಮುಪ್ಪಿನ ಬಸವಲಿಂಗ ಮಹಾಸ್ವಾಮಿಗಳು, ಸಮ್ಮುಖವನ್ನು ನಿಡಗುಂದಿಕೊಪ್ಪ ಶಾಖಾ ಶಿವಯೋಗ ಮಂದಿರದ ಶ್ರೀ ಅಭಿನವ ಚನ್ನಬಸವ ಮಹಾಸ್ವಾಮಿಗಳು ಹಾಗೂ ನಿಡಗುಂದಿ ಧರ್ಮರ ಮಠದ ಶ್ರೀ ಷಣ್ಮುಖಪ್ಪಜ್ಜನವರು ವಹಿಸಲಿದ್ದಾರೆ. ಶ್ರೀ ಅನ್ನದಾನ ವಿಜಯ ವಿದ್ಯಾ ಪ್ರಸಾರಕ ಸಮಿತಿಯ ಪ್ರಧಾನ ಕಾರ್ಯದರ್ಶಿ ರವೀಂದ್ರನಾಥ ದೊಡ್ಡಮೇಟಿ ಕಾರ್ಯಕ್ರಮ ಉದ್ಘಾಟಿಸಲಿದ್ದು, ಸಂಸ್ಥೆಯ ಅಧ್ಯಕ್ಷ ಜಗದೀಶ ಕರಡಿ ಅಧ್ಯಕ್ಷತೆ ವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

## ದೇವಸ್ಥಾನ ಜಾಗದಲ್ಲಿ ರಸ್ತೆ ಕಾಮಗಾರಿ: ಭಕ್ತರ ಆಕ್ರೋಶ

**ವಿಜಯಸಾಕ್ಷಿ ಸುದ್ದಿ, ಮಂಗಳೂರು**

ಐತಿಹಾಸಿಕ ಪುತ್ತೂರು ಶ್ರೀ ಮಹಾಲಿಂಗೇಶ್ವರ ದೇವಸ್ಥಾನ ಆವರಣದಲ್ಲಿ ರಸ್ತೆ ನಿರ್ಮಾಣ ವಿಚಾರ ಭಾರೀ ವಿವಾದಕ್ಕೆ ಕಾರಣವಾಗಿದೆ. ದೇವಸ್ಥಾನಕ್ಕೆ ಸೇರಿದ ಸುಮಾರು 3 ಎಕರೆ, 30 ಕೋಟಿ ರೂಪಾಯಿ ಮೌಲ್ಯದ ಜಾಗದಲ್ಲಿ ಸಾರ್ವಜನಿಕ ರಸ್ತೆ ನಿರ್ಮಿಸಲು ಕೈಗೊಂಡಿರುವ ಕ್ರಮಕ್ಕೆ ಭಕ್ತರು ತೀವ್ರ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

ಕ್ಷೇತ್ರ ಅಭಿವೃದ್ಧಿ ಯೋಜನೆಯಡಿ ಶಾಸಕ ಅಶೋಕ್ ಕುಮಾರ್ ರೈ ಅವರ ನೇತೃತ್ವದಲ್ಲಿ ಈ ಕಾಮಗಾರಿ ಕೈಗೆತ್ತಿಕೊಳ್ಳಲಾಗಿದ್ದು, ಈ ವೇಳೆ ವರ್ಷಗಳ ಇತಿಹಾಸ ಹೊಂದಿದ್ದ ನಟರಾಜ ವೇದಿಕೆ'ಯನ್ನು ನೆಲಸಮಗೊಳಿಸಿರುವುದು ಮತ್ತಷ್ಟು ಅಸಮಾಧಾನಕ್ಕೆ ಕಾರಣವಾಗಿದೆ.

ಮುಜರಾಯಿ ಇಲಾಖೆಯ ನಿಯಮಾವಳಿಯಂತೆ ದೇವಸ್ಥಾನದ ಆಸ್ತಿಯಲ್ಲಿ ಕಾಮಗಾರಿ ನಡೆಸಲು ಟೆಂಡರ್ ಪ್ರಕ್ರಿಯೆ ಕಡ್ಡಾಯ. ಆದರೆ, ಯಾವುದೇ ಅಧಿಕೃತ ಟೆಂಡರ್ ಕರೆಯದೆ ಕಾಮಗಾರಿ ನಡೆಸಲಾಗುತ್ತಿದೆ ಎಂದು ಭಕ್ತರು ಗಂಭೀರ ಆರೋಪ ಮಾಡಿದ್ದಾರೆ. ದೇವಸ್ಥಾನದ ಅಮೂಲ್ಯ ಆಸ್ತಿಯನ್ನು ರಸ್ತೆಗಾಗಿ ಬಳಸುವ ಬದಲು ಬೇರೆ ಮಾರ್ಗವನ್ನು ಅಭಿವೃದ್ಧಿಪಡಿಸಬೇಕೆಂದು ಒತ್ತಾಯಿಸಿದ್ದಾರೆ. ಇದಕ್ಕೆ ಪ್ರತಿಕ್ರಿಯಿಸಿರುವ ದೇವಸ್ಥಾನ ವ್ಯವಸ್ಥಾಪನಾ ಸಮಿತಿ ಅಧ್ಯಕ್ಷ ಪಂಜಿಗುಡ್ಡೆ ಈಶ್ವರ ಭಟ್, ದಿನದಿಂದ ದಿನಕ್ಕೆ ಭಕ್ತರ ಸಂಖ್ಯೆ ಹೆಚ್ಚುತ್ತಿರುವುದರಿಂದ ವಾಹನ ದಟ್ಟಣೆ ನಿಯಂತ್ರಿಸಲು ಅಗಲವಾದ ರಸ್ತೆ ಅನಿವಾರ್ಯವಾಗಿದೆ ಎಂದು ತಿಳಿಸಿದ್ದಾರೆ.

ಭಕ್ತರ ಸುರಕ್ಷತೆ ಮತ್ತು ಸುಗಮ ಸಂಚಾರವನ್ನು ಗಮನದಲ್ಲಿಟ್ಟುಕೊಂಡೇ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

ರಸ್ತೆ ನಿರ್ಮಾಣದ ವಿಚಾರ ಇದೀಗ ಪುತ್ತೂರಿನಲ್ಲಿ ಭಕ್ತರು, ಸ್ಥಳೀಯರು ಮತ್ತು ಆಡಳಿತ ಮಂಡಳಿ ನಡುವೆ ತೀವ್ರ ಚರ್ಚೆಗೆ ಗ್ರಾಸವಾಗಿದ್ದು, ಮುಂದಿನ ಬೆಳವಣಿಗೆಗಳತ್ತ ಎಲ್ಲರ ಗಮನ ನೆಟ್ಟಿದೆ.

## ಡಾ. ಬಿ.ಎಫ್. ದಂಡಿನ್ ರ ಆದರ್ಶ ಬದುಕು ವಿದ್ಯಾರ್ಥಿಗಳಿಗೆ ಸ್ಫೂರ್ತಿ



**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಮಕ್ಕಳ ವ್ಯಕ್ತಿತ್ವ ವಿಕಾಸಕ್ಕೆ ಶಿಕ್ಷಣವೇ ಭದ್ರ ಅಡಿಪಾಯವಾಗಿದ್ದು, ಜ್ಞಾನದ ಬೆಳಕನ್ನು ಸಮಾಜಕ್ಕೆ ಹರಡಿದ ಶಿಕ್ಷಣದ ಸಂತ ಡಾ. ಬಿ.ಎಫ್. ದಂಡಿನ್ ಅವರ ಆದರ್ಶವನ್ನು ಪ್ರತಿಯೊಬ್ಬರೂ ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದು ಪ್ರಕಾಶ್ ಪಲ್ಲೇದ ಹೇಳಿದರು.

ಮಜರೆ ಕೋಡಿಕೊಪ್ಪ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಡಾ. ಬಿ.ಎಫ್. ದಂಡಿನ್ ಅವರ 93ನೇ ಜನ್ಮದಿನ ಅಂಗವಾಗಿ 7ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್ ವಿತರಣೆ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.ಸಣ್ಣ ಹಳ್ಳಿಯಲ್ಲಿ ಜನಿಸಿ ರಾಜ್ಯದಾದ್ಯಂತ ಶಿಕ್ಷಣದ ಬೆಳಕನ್ನು ಹರಡಿದ ಡಾ. ದಂಡಿನ್ ಅವರ ಸಾಧನೆ ಇಂದಿನ ಪೀಳಿಗೆಗೆ ಮಾದರಿ ಯಾಗಿದೆ. ಶಿಕ್ಷಣದ ಮೂಲಕ ಸಾವಿರಾರು ವಿದ್ಯಾರ್ಥಿಗಳ ಬದುಕು ಕಟ್ಟಿಕೊಟ್ಟ ಅವರ ಸೇವೆ ಸದಾ ಸ್ಮರಣೀಯ ಎಂದು ಹೇಳಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಪ್ರಾಚಾರ್ಯ ಶಿವಾನಂದ ಗೋಗೇರಿ ಮಾತನಾಡಿ, ಬಡತನ ಮತ್ತು ಸಂಕಷ್ಟಗಳನ್ನು ಮೆಟ್ಟಿ ನಿಂತು ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ ಡಾ. ದಂಡಿನ್ ಅವರ ಮೌಲ್ಯಗಳು ಹಾಗೂ ಆದರ್ಶಗಳನ್ನು ವಿದ್ಯಾರ್ಥಿಗಳು ಅಳವಡಿಸಿಕೊಂಡರೆ ಉತ್ತಮ ಭವಿಷ್ಯ ರೂಪಿಸಿಕೊಳ್ಳಲು ಸಾಧ್ಯ ಎಂದು ತಿಳಿಸಿದರು.

ಬಳಿಕ 7ನೇ ತರಗತಿ ವಿದ್ಯಾರ್ಥಿಗಳಿಗೆ ಉಚಿತ ನೋಟ್‌ಬುಕ್‌ಗಳನ್ನು ವಿತರಿಸಲಾಯಿತು.

ಕಾರ್ಯಕ್ರಮದಲ್ಲಿ ಶಾಲೆಯ ಪ್ರಧಾನ ಗುರು ಕೆ.ಎಸ್. ಪ್ರಭುಸ್ವಾಮಿ ಮಠ, ಎಸ್‌ಡಿಎಂಸಿ ಅಧ್ಯಕ್ಷ ಹುಲಗಪ್ಪ ಹನುಮಸಾಗರ, ಬಸವರಾಜ ದೇಸಾಯಿಪಟ್ಟಿ, ಆರ್.ಟಿ. ಅರಕಸಾಲಿ, ಎಂ.ಬಿ. ವೆಂಕಟಾಪುರ, ಶಿಕ್ಷಕರು, ಸಿಬ್ಬಂದಿ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## ವಿಶ್ವ ಸ್ತನ್ಯಪಾನ ಸಪ್ತಾಹ ಜಾಗೃತಿ ಕಾರ್ಯಕ್ರಮ

# ತಾಯಿ ಎದೆಹಾಲೇ ಮಗುವಿನ ಮೊದಲ ಜೀವ ರಕ್ಷಕ ಅಮೃತ



**ವಿಜಯಸಾಕ್ಷಿ ಸುದ್ದಿ, ಗದಗ**

ಮಗು ಜನಿಸಿದ ಮೊದಲ ಒಂದು ಗಂಟೆಯೊಳಗೆ ತಾಯಿಯ ಎದೆಹಾಲುಣಿಸುವುದು ಅತ್ಯಂತ ಮಹತ್ವದ್ದಾಗಿದ್ದು, ತಾಯಿಯ ಮೊದಲ ಹಾಲೇ ಮಗುವಿನ ಜೀವ ರಕ್ಷಕ ಅಮೃತವಾಗಿದೆ ಎಂದು ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ರೂಪಸೇನ್ ಚವ್ಹಾಣ ಹೇಳಿದರು.

ಲಕ್ಕುಂಡಿ ಗ್ರಾಮದ ಶ್ರೀ ಅನ್ನದಾನೇಶ್ವರ ದೇವಸ್ಥಾನದ ಸಭಾಭವನದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದ ವತಿಯಿಂದ ವಿಶ್ವ ಸ್ತನ್ಯಪಾನ ಸಪ್ತಾಹ ಅಂಗವಾಗಿ ಆಯೋಜಿಸಿದ್ದ ಮಹಿಳಾ ಜಾಗೃತಿ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ತಾಯಿಯ ಎದೆಹಾಲು ಮಗುವಿಗೆ ಕೇವಲ ಆಹಾರವಲ್ಲ, ರೋಗನಿರೋಧಕ ಶಕ್ತಿ ನೀಡುವ ನೈಸರ್ಗಿಕ ಔಷಧವಾಗಿದೆ. ಮಗು ಜನಿಸಿದ ಬಳಿಕ ದಿನಕ್ಕೆ 8ರಿಂದ 12 ಬಾರಿ ಎದೆಹಾಲುಣಿಸಬೇಕು. ಮೊದಲ ಹಾಲು (ಕೊಲೊಸ್ಟ್ರಮ್) ಮಗುವಿನ ಮೊದಲ ಲಸಿಕೆಯಂತೆ ಕಾರ್ಯನಿರ್ವಹಿಸುವುದರಿಂದ ಅದನ್ನು ತಪ್ಪದೇ ಕುಡಿಸಬೇಕು ಎಂದು ತಿಳಿಸಿದರು.

ಆರೋಗ್ಯ ಶಿಕ್ಷಣಾಧಿಕಾರಿ ಶಂಕ್ರಪ್ಪ ಹನಕನಹಳ್ಳಿ ಮಾತನಾಡಿ, ವಿಶ್ವ ಸ್ತನ್ಯಪಾನ ಸಪ್ತಾಹವು ತಾಯಿಯ ಎದೆಹಾಲಿನ ಮಹತ್ವದ ಕುರಿತು ಜಾಗೃತಿ ಮೂಡಿಸುವ ಉದ್ದೇಶ ಹೊಂದಿದೆ. ಮಗುವಿಗೆ ಮೊದಲ ಆರು ತಿಂಗಳು ಕೇವಲ ತಾಯಿಯ ಹಾಲನ್ನೇ ನೀಡಬೇಕು. ಇದರಿಂದ ಅತಿಸಾರ, ನ್ಯುಮೋನಿಯಾ, ಕಿವಿ ಸೋಂಕು ಸೇರಿದಂತೆ ಹಲವು ಕಾಯಿಲೆಗಳಿಂದ ರಕ್ಷಣೆ ದೊರೆಯುತ್ತದೆ ಎಂದು ಹೇಳಿದರು.

> **ತಾಯಿಯ ಎದೆಹಾಲೇ ಮಗುವಿನ ಮೊದಲ ಲಸಿಕೆ, ಮೊದಲ ಆಹಾರ ಮತ್ತು ಮೊದಲ ಜೀವ ರಕ್ಷಕ ಅಮೃತ. ಪ್ರತಿಯೊಬ್ಬ ತಾಯಿಯೂ ಇದನ್ನು ತಪ್ಪದೆ ಪಾಲಿಸಬೇಕು.**
>
> **- ರೂಪಸೇನ್ ಚವ್ಹಾಣ,**
> ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ

ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ಸಿದ್ದಪ್ಪ ಎನ್. ಲಿಂಗದಾಳ ಮಾತನಾಡಿ, ತಾಯಿಯ ಎದೆಹಾಲು ತಾಯಿ ಮತ್ತು ಮಗುವಿನ ಆರೋಗ್ಯಕ್ಕೂ ಸಮಾನವಾಗಿ ಪ್ರಯೋ ಜನಕಾರಿ. ಹೆರಿಗೆಯ ನಂತರ ಗರ್ಭಾಶಯ ಬೇಗ ಸಂಕೋಚನಗೊಳ್ಳಲು, ರಕ್ತಸ್ರಾವ ಕಡಿಮೆ ಯಾಗಲು ಹಾಗೂ ಸ್ತನ ಕ್ಯಾನ್ಸರ್ ಅಪಾಯ ತಗ್ಗಿಸಲು ಇದು ಸಹಕಾರಿಯಾಗಿದೆ ಎಂದು ತಿಳಿಸಿದರು.

ಪ್ರಾಥಮಿಕ ಆರೋಗ್ಯ ಸುರಕ್ಷಾಧಿಕಾರಿ ರಾಯಭಾಗಿ ಮಾತನಾಡಿ, ಎದೆಹಾಲುಣಿಸಿದರೆ ಸೌಂದರ್ಯ ಹಾಳಾಗುತ್ತದೆ ಎಂಬುದು ಕೇವಲ ಮೂಢನಂಬಿಕೆ. ತಾಯಂದಿರು ಇಂತಹ ತಪ್ಪು ಕಲ್ಪನೆಗಳಿಂದ ದೂರವಿದ್ದು ಆರೋಗ್ಯ ಇಲಾಖೆಯ ಸಲಹೆಗಳನ್ನು ಪಾಲಿಸಬೇಕು ಎಂದು ಮನವಿ ಮಾಡಿದರು. ಹಿರಿಯ ಆರೋಗ್ಯ ನಿರೀಕ್ಷಣಾಧಿಕಾರಿ ವೈ.ಎನ್. ಕಡೆಮನಿ ತಾಯಂದಿರಿಗೆ ಸರಿಯಾದ ರೀತಿಯಲ್ಲಿ ಎದೆಹಾಲುಣಿಸುವ ವಿಧಾನವನ್ನು ವಿವರಿಸಿದರು. ಕಾರ್ಯಕ್ರಮದಲ್ಲಿ ಆರೋಗ್ಯ ಇಲಾಖೆ ಸಿಬ್ಬಂದಿ, ಆಶಾ ಕಾರ್ಯಕರ್ತೆಯರು, ಅಂಗನವಾಡಿ ಕಾರ್ಯಕರ್ತೆಯರು, ಗರ್ಭಿಣಿಯರು, ಬಾಣಂತಿಯರು ಹಾಗೂ ಮಹಿಳೆಯರು ಭಾಗವಹಿಸಿದ್ದರು.

## ಸೆಕೆಂಡ್ ಚಾನ್ಸ್ ಮೂಲಕ ಶಿಕ್ಷಣ ಪೂರ್ಣಗೊಳಿಸಿ ಸ್ವಾವಲಂಬಿ ಜೀವನ ಕಟ್ಟಿಕೊಳ್ಳಿ

# ಅರ್ಧದಲ್ಲೇ ನಿಂತ ಓದಿಗೆ ಮತ್ತೆ ಅವಕಾಶ

**ವಿಜಯಸಾಕ್ಷಿ ಸುದ್ದಿ, ನರೇಗಲ್ಲ**



ಆರ್ಥಿಕ ಸಂಕಷ್ಟ, ಬಾಲ್ಯ ವಿವಾಹ, ಕೌಟುಂಬಿಕ ಸಮಸ್ಯೆ ಅಥವಾ ಇತರ ಕಾರಣಗಳಿಂದ ವಿದ್ಯಾಭ್ಯಾಸವನ್ನು ಅರ್ಧದಲ್ಲೇ ಕೈಬಿಟ್ಟಿರುವ ಹೆಣ್ಣುಮಕ್ಕಳು ಹಾಗೂ ಮಹಿಳೆಯರು ನಿರಾಶರಾಗದೆ 'ಸೆಕೆಂಡ್ ಚಾನ್ಸ್' ಯೋಜನೆಯ ಮೂಲಕ ಮತ್ತೆ ಶಿಕ್ಷಣದ ಮುಖ್ಯವಾಹಿನಿಗೆ ಸೇರಿ ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಸಿಆರ್‌ಪಿ ಎಸ್.ಆರ್. ಮೂಲಿಮನಿ ಕರೆ ನೀಡಿದರು. ಸಮೀಪದ ಜಕ್ಕಲಿ ಗ್ರಾಮದಲ್ಲಿ ಪ್ರಥಮ್ ಸಂಸ್ಥೆ ಆಯೋಜಿಸಿದ್ದ 'ಸೆಕೆಂಡ್ ಚಾನ್ಸ್' ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, ಶಿಕ್ಷಣವು ಕೇವಲ ಅಕ್ಷರಜ್ಞಾನವಲ್ಲ; ಆತ್ಮವಿಶ್ವಾಸ, ಸ್ವಾಭಿಮಾನ ಹಾಗೂ ಗೌರವಯುತ ಬದುಕಿಗೆ ಭದ್ರ ಬುನಾದಿಯಾಗಿದೆ.

ಶಿಕ್ಷಣದಿಂದ ವಂಚಿತರಾದ ಮಹಿಳೆಯರು ಈ ಯೋಜನೆಯಡಿ ಎಸ್‌ಎಸ್‌ಎಲ್‌ಸಿ ಪೂರ್ಣಗೊಳಿಸಿ ಉನ್ನತ ಶಿಕ್ಷಣ ಹಾಗೂ ಉತ್ತಮ ಉದ್ಯೋಗಾವಕಾಶಗಳನ್ನು ಪಡೆದುಕೊಳ್ಳಬೇಕು ಎಂದು ತಿಳಿಸಿದರು.

ಎಸ್.ಎ.ಜೆ.ಡಿ. ಸರ್ಕಾರಿ ಪ್ರೌಢಶಾಲೆಯ ಮುಖ್ಯ ಶಿಕ್ಷಕಿ ಎಂ. ಶಾರದಾ ಮಾತನಾಡಿ, ಮಹಿಳಾ ಶಿಕ್ಷಣವು ಸಮಾಜದ ಅಭಿವೃದ್ಧಿಯ ಮೂಲಾಧಾರವಾಗಿದ್ದು, ಶಿಕ್ಷಣದಿಂದ ದೂರ ಉಳಿದವರು ಯಾವುದೇ ಹಿಂಜರಿಕೆಯಿಲ್ಲದೆ ಈ ಯೋಜನೆಯ ಸದುಪಯೋಗ ಪಡೆದುಕೊಳ್ಳಬೇಕು ಎಂದು ಹೇಳಿದರು.

ಕೆಜಿಎಸ್ ಶಾಲೆಯ ಮುಖ್ಯ ಶಿಕ್ಷಕ ಎಸ್.ಬಿ. ಗವಿ, ಶಿಕ್ಷಣವು ಸಾಮಾಜಿಕ ಮತ್ತು ಆರ್ಥಿಕ ಸಬಲೀಕರಣಕ್ಕೆ ಪ್ರಮುಖ ಸಾಧನವಾಗಿದ್ದು, 'ಸೆಕೆಂಡ್ ಚಾನ್ಸ್' ಯೋಜನೆ ಮಹಿಳೆಯರಿಗೆ ಹೊಸ ಬದುಕಿನ ದಾರಿಯನ್ನು ತೆರೆದಿದೆ ಎಂದು ಅಭಿಪ್ರಾಯಪಟ್ಟರು.

ಓದು ಕರ್ನಾಟಕ ವಿಭಾಗೀಯ ಸಂಯೋಜಕ ಶಿವರಾಜಕುಮಾರ್ ಸ್ಟಾಂಪಿನ ಮಾತನಾಡಿ, ಪ್ರಥಮ್ ಸಂಸ್ಥೆಯು ಶಿಕ್ಷಣದಿಂದ ವಂಚಿತರಾದ ಮಹಿಳೆಯರಿಗೆ ಉಚಿತ ಎಸ್‌ಎಸ್‌ಎಲ್‌ಸಿ ಶಿಕ್ಷಣ, ಪಠ್ಯಪುಸ್ತಕ, ಕಲಿಕಾ ಸಾಮಗ್ರಿ ಹಾಗೂ ಪರೀಕ್ಷಾ ಮಾರ್ಗದರ್ಶನ ಒದಗಿಸುತ್ತಿದೆ ಎಂದು ಮಾಹಿತಿ ನೀಡಿದರು. ಲೈವ್‌ಹುಡ್ ಕೋ-ಆರ್ಡಿನೇಟರ್ ವಿಜಯ್, ಎಸ್‌ಎಸ್‌ಎಲ್‌ಸಿ ನಂತರ ಉನ್ನತ ಶಿಕ್ಷಣ, ಕೌಶಲಾಭಿವೃದ್ಧಿ ತರಬೇತಿ ಹಾಗೂ ಉದ್ಯೋಗಾವಕಾಶಗಳ ಕುರಿತು ವಿವರಿಸಿದರು.

ಕಾರ್ಯಕ್ರಮದಲ್ಲಿ ಮಹಿಳೆಯರು, ಯುವತಿಯರು, ಶಿಕ್ಷಕರು, ಪ್ರಥಮ್ ಸಂಸ್ಥೆಯ ಸಿಬ್ಬಂದಿ ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka
Printed at : Sai Printing Press, Near Joda Maruti Temple, Gadag-582101, Dist : Gadag- Karnataka